ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 173

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಬುಧವಾರ: 17-06-2026


## ರಾಜ್ಯದಲ್ಲಿ ಮಳೆ ಶೇ.21ರಷ್ಟು ಕೊರತೆ, ರೈತರಲ್ಲಿ ಆತಂಕ

# ಮಳೆ ಕೊರತೆ ಬರದ ಛಾಯೆ

**ಬೆಂಗಳೂರು, ಜೂ. 16–** ರಾಜ್ಯದಲ್ಲಿ ನೈರುತ್ಯ ಮುಂಗಾರು ಕೊರತೆಯಿಂದ ಬರದ ಆತಂಕ ಎದುರಾಗಿದ್ದು ಜಲಾಶಯಗಳಲ್ಲೂ ನೀರಿನ ಮಟ್ಟ ಕುಸಿದಿದೆ ಮುಂದಿನ ದಿನಗಳಲ್ಲಿ ಉತ್ತಮ ಮಳೆಯಾಗದಿದ್ದರೆ ಕುಡಿಯುವ ನೀರಿಗು ತತ್ವಾರವಾಗಲಿದೆ ದೇಶ ಹಾಗೂ ರಾಜ್ಯದಲ್ಲಿ ಮುಂಗಾರು ಮಳೆ ಕಡಿಮೆಯಾಗಿದ್ದು ಜೂನ್ ಮೊದಲ ವಾರದಲ್ಲಿ ರಾಜ್ಯದಲ್ಲಿ ಮುಂಗಾರು ಮಳೆ ವಾಡಿಕೆ ಗಿಂತ ಶೇಕಡ 21ರಷ್ಟು ಕಡಿಮೆಯಾಗಿದೆ ಮಳೆ ಕೊರತೆಯಿಂದ ರಾಜ್ಯದ ಜಲಾಶಯಗಳಲ್ಲೂ ನೀರಿನ ಮಟ್ಟ ಕುಸಿದಿದ್ದು ಕಳೆದ ವರ್ಷಕ್ಕೆ ಹೋಲಿಸಿದರೆ ಈ ವರ್ಷ ಜಲಾಶಯಗಳಲ್ಲಿ ನೀರಿನ ಸಂಗ್ರಹ ತೀರಾ ಕಡಿಮೆ ಇದೆ ಹಾಗಾಗಿ ಬರದ ಆತಂಕದ ಜೊತೆಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗುವ ಸಾಧ್ಯತೆಯೂ ಇದೆ ಮಳೆ ಕೊರತೆಯ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ನಿನ್ನೆ ಅಧಿಕಾರಿಗಳ ಸಭೆ ನಡೆಸಿ ಮುಂದಿನ ದಿನಗಳಲ್ಲೂ ಮಳೆ ಕೊರತೆ ಮುಂದುವರಿದರೆ ಬರ ಪರಿಸ್ಥಿತಿಯನ್ನು ಎದುರಿಸಲು ತಯಾರಿ ತಯಾರಿ ಮಾಡಿಕೊಳ್ಳಿ ಎಂದು ಅಧಿಕಾರಿಗಳಿಗೆ ಸೂಚಿಸಿದ್ದಾರೆ

‘ಬೆಂಗಳೂರು ಸೇರಿದಂತೆ ರಾಜ್ಯದ ದಕ್ಷಿಣ ಭಾಗಗಳಿಗೆ ಕುಡಿಯುವ ನೀರು ಒದಗಿಸುವ ಕಾವೇರಿ ಜಲಾಯನ ಪ್ರದೇಶದಲ್ಲೂ ಮಳೆ ವಾಡಿಕೆಗಿಂತ ಕಡಿಮೆಯಾಗಿದೆ ಈ ವರ್ಷ ಕಾವೇರಿ ಕಣಿವೆಯಲ್ಲಿ ಶೇಕಡ 36ರಷ್ಟು ಮಳೆ ಕೊರತೆ ಆಗಿದೆ ಇಷ್ಟೇ ಅಲ್ಲದೆ ಕರಾವಳಿಯಲ್ಲೂ ಶೇಕಡ 41% ರಷ್ಟು ಮಳೆ ಕಡಿಮೆಯಾಗಿದೆ .

ರಾಜ್ಯ ಅಷ್ಟೇ ಅಲ್ಲ ಇಡೀ ದೇಶದಲ್ಲೇ ಮಳೆ ಕೊರತೆ ಉಂಟಾಗಿದೆ ನೈರುತ್ಯ ಮುಂಗಾರಿನ ಮಳೆ ಕೊರತೆ ಇಡೀ ದೇಶದಲ್ಲಿ ಶೇಕಡ



40ರಷ್ಟು ಆಗಿದ್ದು ಅಣೆಕಟ್ಟುಗಳು ಖಾಲಿಯಾಗಿವೆ.

ಇನ್ನು ಒಂದು ವಾರ ಮಳೆ ಇಲ್ಲ: ಮುಂಗಾರು ಮಾರುತಗಳು ತಾಂತ್ರಿಕವಾಗಿ ಮುನ್ನಡೆಯುತ್ತಿದ್ದರೂ, ವ್ಯಾಪಕ ಮಳೆಯಾಗುವ ಪ್ರಕ್ರಿಯೆ ಮುಂದಿನ ಕನಿಷ್ಠ ಒಂದು ವಾರದ ಮಟ್ಟಿಗೆ ತಣ್ಣಗಾಗುವ ಸಾಧ್ಯತೆಯಿದೆ. ಹವಾಮಾನ ಮಾದರಿಗಳ ಪ್ರಕಾರ, ಪ್ರಸ್ತುತ ಉಂಟಾಗಿರುವ ಈ ಮಳೆ ಕೊರತೆಯು ಜೂನ್ 23ರ ಆಸುಪಾಸಿನವರೆಗೂ ಮುಂದುವರಿಯಲಿದ್ದು, ಆ ನಂತರವಷ್ಟೇ ಮುಂಗಾರು ಚುರುಕಾಗುವ ಮುನ್ಸೂಚನೆ ಲಭ್ಯವಾಗಿದೆ.


ಹವಾಮಾನ ತಜ್ಞರ ಪ್ರಕಾರ, ಮುಂಗಾರು ಮಾರುತಗಳು ಈಗಾಗಲೇ ಮಧ್ಯ ಹಾಗೂ ಪೂರ್ವ ಭಾರತದ ಹಲವು ಭಾಗಗಳಿಗೆ ಪ್ರವೇಶಿಸಿವೆ. ಆದರೆ, ಮಳೆ ತರುವ ಈ ಮಾರುತಗಳ ವ್ಯವಸ್ಥೆ ಅತ್ಯಂತ ದುರ್ಬಲವಾಗಿದೆ. ಜೂನ್ 15 ರಿಂದ ಜೂನ್ 21ರ ಅವಧಿಯಲ್ಲಿ ದೇಶದ ಬಹುತೇಕ ಭಾಗಗಳಲ್ಲಿ ಮುಂಗಾರು ನಿಷ್ಕ್ರಿಯವಾಗಿರಲಿದ್ದು, ಈಗಾಗಲೇ ಹಲವು ಜಿಲ್ಲೆಗಳಲ್ಲಿ ತಲೆದೋರಿರುವ ಮಳೆ ಕೊರತೆ ಮತ್ತಷ್ಟು ತೀವ್ರಗೊಳ್ಳುವ ಆತಂಕ ಮೂಡಿದೆ.


ಮುಂಗಾರಿನ ವ್ಯಾಪಕ ಮಳೆಯ ಅನುಪಸ್ಥಿತಿಯಲ್ಲಿ, ಮುಂದಿನ ವಾರ ಲಭ್ಯವಾಗುವ ಬಹುತೇಕ ಮಳೆಯು ಸ್ಥಳೀಯವಾಗಿ ಸೃಷ್ಟಿಯಾಗುವ ಗುಡುಗು ಸಹಿತ ಮಳೆಯ ರೂಪದಲ್ಲಿರಲಿದೆ. ವಿಶೇಷವಾಗಿ ದಕ್ಷಿಣ ಭಾರತದ ಭಾಗಗಳಲ್ಲಿ ಇದು ಕಂಡುಬರಲಿದೆ. ಕರ್ನಾಟಕ-ಆಂಧ್ರಪ್ರದೇಶ-ತಮಿಳುನಾಡು ಗಡಿ ಭಾಗಗಳು ಹಾಗೂ ಪೂರ್ವ ಘಟ್ಟಗಳ ವ್ಯಾಪ್ತಿಯಲ್ಲಿ ಆಗಾಗ್ಗೆ ತೀವ್ರ ಗುಡುಗು, ಮಿಂಚು ಹಾಗೂ ಬಿರುಗಾಳಿ ಸಹಿತ ಸಾಧಾರಣದಿಂದ ಭಾರಿ ಮಳೆಯಾಗುವ ಸಾಧ್ಯತೆಯಿದೆ.

ಮಾರುತಗಳು ಮಹಾರಾಷ್ಟ್ರ, ಕರ್ನಾಟಕದ ಉಳಿದ ಭಾಗಗಳು, ತೆಲಂಗಾಣ, ಒಡಿಶಾ, ಜಾರ್ಖಂಡ್, ಬಿಹಾರ್ ಮತ್ತು ಛತ್ತೀಸ್‌ಗಢದ ಕೆಲವು ಭಾಗಗಳಿಗೆ ಮುಂದಿನ 4-5 ದಿನಗಳಲ್ಲಿ ಮುನ್ನಡೆಯಲು ವಾತಾವರಣ ಪೂರಕವಾಗಿದೆ. ಆದರೆ, ಮುಂಗಾರು ಮಾರುತಗಳ 'ಮುನ್ನಡೆ' ಮತ್ತು ಅವುಗಳಿಂದಾಗುವ 'ಮಳೆ ಪ್ರಕ್ರಿಯೆ' ಒಂದೇ ಅಲ್ಲ ಎನ್ನುತ್ತಾರೆ ತಜ್ಞರು. ನಕ್ಷೆಯಲ್ಲಿ ಮಾರುತಗಳು ಉತ್ತರ ಭಾರತದ ಕಡೆಗೆ ಚಲಿಸುತ್ತಿದ್ದರೂ, ವ್ಯಾಪಕ ಮಳೆಗೆ ಬೇಕಾದ ಬಲವಾದ ವಾತಾವರಣದ ಒತ್ತಡ ಸದ್ಯಕ್ಕೆ ಸೃಷ್ಟಿಯಾಗಿಲ್ಲ.

ಜೂನ್ ದ್ವಿತೀಯಾರ್ಧದಲ್ಲಿ ಹವಾಮಾನದಲ್ಲಿ ತಕ್ಕಮಟ್ಟಿನ ಸುಧಾರಣೆ ಕಂಡುಬರಲಿದೆ. ಜೂನ್ 22 ರಿಂದ 28ರ ಅವಧಿಯಲ್ಲಿ ಒಳಕರ್ನಾಟಕ, ಆಂಧ್ರ-ಕರ್ನಾಟಕ 2ನೇಪುಟಕ್ಕೆ

## ತಾಲೂಕು ಪಂಚಾಯತಿ ವ್ಯವಸ್ಥಾಪಕರ ಮನೆಯಲ್ಲಿ ಕಳ್ಳತನ"



ಧೈರ್ಯದ ದಾರಿ

**ಮಾನ್ವಿ –:** ಪಟ್ಟಣದಲ್ಲಿ ತಾಲೂಕು ಪಂಚಾಯತಿ ವ್ಯವಸ್ಥಾಪಕರಾದ ಬಸವರಾಜ ಅವರ ಕ್ವಾಟರ್ಸ್ ಮನೆಯಲ್ಲಿ ಕಳ್ಳತನ ನಡೆದ ಘಟನೆ ರವಿವಾರ ತಡವಾಗಿ ಬೆಳಕಿಗೆ ಬಂದಿದೆ. ಮೊದಲ ಬಾರಿಯ ನಿರ್ಲಕ್ಷದಿಂದ ಅವರ ಮನೆಯಲ್ಲಿ ಇದು ಎರಡನೇ ಬಾರಿ ನಡೆದ ಘಟನೆಯಾಗಿದೆ.ಬಸವರಾಜ ದಂಪತಿಗಳು ತಮ್ಮ ಮಗನ ಪದವಿ ಪ್ರಧಾನ ಸಮಾರಂಭಕ್ಕೆ ಶುಕ್ರವಾರ ಬೇರೆ ಊರಿಗೆ ಹೋಗಿ ಎರಡು ದಿನಗಳ ಬಳಿಕ ರವಿವಾರ ಮರಳಿ ಮಾನ್ವಿಗೆ ಹಿಂದಿರುಗಿದಾಗ ಕಳ್ಳತನ ನಡೆದ ಘಟನೆ ಬೆಳಕಿಗೆ ಬಂದಿದೆ.ಅವರ ಸರ್ಕಾರಿ ಕೌಟರ್ಸ್ ಬಾಗಿಲು ಮುರಿದು ಒಳ ನುಗ್ಗಿರುವ ಕಳ್ಳರು ಆಲಮರಿ ಬೀಗ ಮುರಿದು ಮೂರು ತೊಲೆ ಬಂಗಾರ, ಎರಡು ಬೆಳ್ಳಿ ದೀಪ, ನಾಲ್ಕು ಸಾವಿರ ನಗದು, ಮೊಬೈಲ್ ಕಳ್ಳತನ ಮಾಡಿದ್ದಾರೆ.ಈ ಕುರಿತು ಮಾನ್ವಿ ಪೊಲೀಸ್ ಠಾಣೆಗೆ ಮಾಹಿತಿ ನೀಡಿದ್ದು ಪೊಲೀಸರು ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ. ಯಾರ ಮೇಲೂ ಅನುಮಾನ ವ್ಯಕ್ತಪಡಿಸದ ಕಾರಣ ದೂರು ಪಡೆದು ತನಿಖೆ ಮಾಡುವುದಾಗಿ ಪೊಲೀಸರು ತಿಳಿಸಿದ್ದಾರೆ.ಪಟ್ಟಣದಲ್ಲಿ ಇತ್ತೀಚಿಗೆ ಬಸ್ ನಿಲ್ದಾಣ ಸುತ್ತಮುತ್ತ ಕಳ್ಳತನ ಪ್ರಕರಣಗಳು ಮರುಕಳಿಸುತ್ತಿದ್ದು ಪೊಲೀಸರು ಇವನ್ನು ಗಂಭೀರವಾಗಿ ಪರಿಗಣಿಸದೆ ಕಳ್ಳರ ಪತ್ತೆ ಮುಂದಾಗುತ್ತಿಲ್ಲ ಎಂದು ಸಾರ್ವಜನಿಕರು ಆತಂಕ ವ್ಯಕ್ತಪಡಿಸಿದ್ದಾರೆ.

## ಜೂ.18 ರಂದು ಗಡಿನಾಡು ಕನ್ನಡ ಜಾಗೃತಿ ಜಾಥ: ಬಸವರಾಜ ಮೈಲಾರಿ



ಧೈರ್ಯದ ದಾರಿ

**ಮಾನ್ವಿ:**ಪಟ್ಟಣದ ಪತ್ರಿಕಾಭವನದಲ್ಲಿ ಕನ್ನಡ ಸೇನೆ ಕರ್ನಾಟಕ ತಾಲೂಕು ಅಧ್ಯಕ್ಷ ಬಸವರಾಜ ಮೈಲಾರಿ ಮಾತನಾಡಿ ರಾಯಚೂರು ನಗರದಲ್ಲಿ ಜೂ.18 ರಂದು ಬೆಳಿಗ್ಗೆ ಗಡಿ ಭಾಗದ ಕನ್ನಡ ಶಾಲೆಗಳ ಸಂರಕ್ಷಣೆ, ಉದ್ಯೋಗ, ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಒತ್ತಾಯಿಸಿ ಗಡಿನಾಡು ಕನ್ನಡ ಜಾಗೃತಿ ಜಾಥ ವನ್ನು ರಾಯಚೂರಿನ ಆರ್.ಟಿ.ಓ. ಇಲಾಖೆಯಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ಹಮ್ಮಿಕೊಳ್ಳಲಾಗಿದು ನೂರಾರು ಕಾರ್ಯಕರ್ತರಿಂದ ಬೃಹತ್ ಬೈಕ್ ಜಾಥದ ಮೂಲಕ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯ ಮಂತ್ರಿಗಳಿಗೆ ಮನವಿ ಸಲ್ಲಿಸಲಾಗುವುದು.

ಬೃಹತ್ ಬೈಕ್ ಜಾಥದಲ್ಲಿ ಚಲನಚಿತ್ರ ನಟ ಟೆನ್ನಿಸ್ ಕೃಷ್ಣ, ಕನ್ನಡ ಸೇನೆ ಕರ್ನಾಟಕ ರಾಜ್ಯಾಧ್ಯಕ್ಷರಾದ ಕೆ.ಆರ್. ಕುಮಾರ್, ಜಿಲ್ಲಾಧ್ಯಕ್ಷರಾದ ಬಸವರಾಜ ಮರ್ಕಂದಿನ್ನಿ ಹಾಗೂ ರಾಜ್ಯ ಹಾಗೂ ಜಿಲ್ಲೆಯ ಪದಾಧಿಕಾರಿಗಳು ಸೇರಿದಂತೆ ಸಾವಿರಾರು ಜನರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಶಿವಾನಂದನಾಯಕ,. ಶೇಖ್ ಮುಸ್ತಫ, ಮಂಜುನಾಥ ಬಂಡಿ, ಭೀಮೇಶನಾಯಕ ಕರಡಿಗುಡ್ಡ, ಭೀಮೇಶನಾಯಕ, ಪ್ರಭುರಾಜ್ ಮೇಸ್ತ್ರಿ, ಅಜರುದ್ದಿನ್ ,ಸುದರ್ಶನ್ ಪೂಜಾರಿ, ರಾಘವೇಂದ್ರ ವಕೀಲರು,ಶಂಕರಪ್ಪ, ಸಂಜೀವನಾಯಕ, ಸಿದ್ದಪ್ಪನಾಯಕ, ಶಿವುನಾಯಕ ಬಾಲನಗರ, ನೂರ್ ಮಹ್ಮದ್ ನಾಯಕ,ನಜೀರ್, ಹನುಮಂತ ಕರಡಿಗುಡ್ಡ ,ವೇಣುಕುಮಾರ ಸೇರಿದಂತೆ ಇನ್ನಿತರರು ಇದ್ದರು.

## ವಿಕಾಸ ಗೆಳೆಯರ ಬಳಗದ ವತಿಯಿಂದ ರಕ್ತದಾನ ಶಿಬಿರ: ಗೆಳೆಯನನ್ನು ಜೀವಂತವಾಗಿಡುತ್ತಿರುವುದು ಶ್ಲಾಘನೀಯ – ಅಭಿನವ ಸೋಮನಾಥ ಶಿವಾಚಾರ್ಯರು

ಧೈರ್ಯದ ದಾರಿ




**ಸಿರವಾರ, ಜೂನ್ 16:** "ಜೀವ ಅತ್ಯಮೂಲ್ಯವಾದುದು. ಗೆಳೆಯನ ಅಗಲಿಕೆಯ ನಂತರವೂ ಉತ್ತಮ ಕಾರ್ಯಗಳನ್ನು ಮಾಡುವ ಮೂಲಕ ಅವನನ್ನು ಜನರ ಮನಸ್ಸಿನಲ್ಲಿ ಜೀವಂತವಾಗಿರಿಸುತ್ತಿರುವ ಗೆಳೆಯರ ಬಳಗದ ಕಾರ್ಯ ಶ್ಲಾಘನೀಯ" ಎಂದು ನವಲಕಲ್ ಬೃಹನ್ಮಠದ ಅಭಿನವ ಸೋಮನಾಥ ಶಿವಾಚಾ ರ್ಯರು ಹೇಳಿದರು.

ಪಟ್ಟಣದ ಛಾಯಾಗ್ರಾಹಕ ದಿ. ವಿಕಾಸ್ ಅವರ ಜನ್ಮದಿನದ ಅಂಗವಾಗಿ, ಮಂದಕಲ್ ಗೆಳೆಯರ ಬಳಗ, ಜ್ಞಾನವೃಕ್ಷ ಟ್ರಸ್ಟ್ (ದೇವದುರ್ಗ), ವಿಕಾಸ ಗೆಳೆಯರ ಬಳಗ (ಹುಲಿಗೆಮ್ಮ ದೇವಸ್ಥಾನ, ಸಿರವಾರ) ಹಾಗೂ ರೀಮ್ಸ್ ಆಸ್ಪತ್ರೆಯ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ರಕ್ತದಾನ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಾರ್ಯಕ್ರಮದ ಮುಖ್ಯಾಂಶಗಳು:

ರಕ್ತದಾನದ ಮಹತ್ವ: "ಇಂದು ಅನೇಕ ಆಸ್ಪತ್ರೆಗಳಲ್ಲಿ ರಕ್ತ ಸಿಗದೆ ಸಾವು ಸಂಭವಿಸುತ್ತಿವೆ. ಅಂತಹ ಸಂದರ್ಭದಲ್ಲಿ ಇಂತಹ ರಕ್ತದಾನ ಶಿಬಿರವನ್ನು ಆಯೋಜಿಸುವ ಮೂಲಕ ಇತರರ ಜೀವ ಉಳಿಸಲು ಆಸರೆಯಾಗಿದ್ದೀರಿ" ಎಂದು ಶ್ರೀಗಳು ಮೆಚ್ಚುಗೆ ವ್ಯಕ್ತಪಡಿಸಿದರು.

ಯುವಜನತೆಗೆ ಕಿವಿಮಾತು: ಯುವಕರು ಮದ್ಯಪಾನ, ಧೂಮಪಾನದಂತಹ ದುಶ್ಚಟಗಳಿಗೆ ದಾಸರಾಗದೆ, ಇಂತಹ ಸಮಾಜಮುಖಿ ಕಾರ್ಯಗಳಲ್ಲಿ ತಮ್ಮನ್ನು ತೊಡಗಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಪರಿಸರ ಜಾಗೃತಿ: ಪ್ರತಿಯೊಬ್ಬರೂ ದಿ. ವಿಕಾಸ್ ಅವರ ಹೆಸರಿನಲ್ಲಿ ತಲಾ ಒಂದು ಸಸಿಯನ್ನು ನೆಟ್ಟು ಪರಿಸರ ರಕ್ಷಣೆಗೆ ಮುಂದಾಗಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಸಂಜೀವಿನಿ ಟ್ರಸ್ಟ್‌ನ ಜ್ಞಾನಮಿತ್ರ, ಗಾಯಕ ಶಂಕರಗೌಡ, ರೀಮ್ಸ್ ಆಸ್ಪತ್ರೆಯ ವೈದ್ಯ ಡಾ. ಪವನಕುಮಾರ, ವಿನಾಯಕ ಶಾಲೆಯ ಮುಖ್ಯೋಪಾಧ್ಯಾಯ ಬಸವಲಿಂಗಪ್ಪ, ಉಪನ್ಯಾಸಕ ಫಕ್ರುದ್ದೀನ್, ಮೌನೇಶ ನಾಯಕ ಮಂದಕಲ್ ಸೇರಿದಂತೆ ಮಂದಕಲ್ ಗೆಳೆಯರ ಬಳಗ, ಜ್ಞಾನವೃಕ್ಷ ಟ್ರಸ್ಟ್ ಮತ್ತು ವಿಕಾಸ ಗೆಳೆಯರ ಬಳಗದ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಪ್ರಧಾನಮಂತ್ರಿ ವಿಕಸಿತ ಭಾರತ ಯೋಜನೆ ಉದ್ಯೋಗವನ್ನು ಹೆಚ್ಚಿಸುವ ಗುರಿ ಹೊಂದಿದೆ: ನಿರಾಜ್ ಕುಮಾರ್

ಧೈರ್ಯದ ದಾರಿ

**ರಾಯಚೂರು ಜೂನ್ 16:** 2025ರ ಆಗಸ್ಟ್ 15ರಂದು ಪ್ರಧಾನಿ ನರೇಂದ್ರ ಮೋದಿ ಅವರು ಪ್ರಾರಂಭಿಸಿದ ಪ್ರಧಾನಮಂತ್ರಿ ವಿಕಸಿತ ಭಾರತ ಉದ್ಯೋಗ ಯೋಜನೆಯು ಭಾರತದಲ್ಲಿ ಖಾಸಗಿ ವಲಯದಲ್ಲಿ ಮೊದಲ ಬಾರಿಗೆ ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗವನ್ನು ಹೆಚ್ಚಿಸುವ ಗುರಿಯನ್ನು ಹೊಂದಿರುವ ಉದ್ಯೋಗ ಸೃಷ್ಟಿ ಯೋಜನೆಯಾಗಿದೆ ಎಂದು ರಾಯಚೂರಿನ ಪ್ರಾದೇಶಿಕ ಸಹಾಯಕ ಭವಿಷ್ಯ ನಿಧಿ ಆಯುಕ್ತರಾದ ನಿರಾಜ್ ಕುಮಾರ್ ಅವರು ಹೇಳಿದರು.

ಜೂನ್ 16ರ ಮಂಗಳವಾರ ದಂದು ನಗರದ ಇಪಿಎಫ್ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಯೋಜನಯಡಿ 1 ಲಕ್ಷ ಕೋಟಿ ರೂ. ವೆಚ್ಚದೊಂದಿಗೆ ಈ ಯೋಜನೆಯು 2025ರ ಆಗಸ್ಟ್ 1ರಿಂದ 2027ರ ಜುಲೈ 31ರ ಅವಧಿಯಲ್ಲಿ 3.5 ಕೋಟಿ ಉದ್ಯೋಗಗಳನ್ನು ಸೃಷ್ಟಿಸುವ ಗುರಿಯನ್ನು ಹೊಂದಿದೆ. ಈ ಯೋಜನೆಯು ಎರಡು ವಿಭಾಗಗಳನ್ನು ಒಳಗೊಂಡಿದ್ದು, ಭಾಗ-ಎ ಮೊದಲ ಬಾರಿಗೆ ಕೆಲಸ ಮಾಡುವವರ ಮೇಲೆ ಗಮನ ಕೇಂದ್ರೀಕರಿಸಿದರೆ ಭಾಗ-ಬಿ ಉದ್ಯೋಗದಾತರು ಅಥವಾ ನಿಯೋಜಕರ ಮೇಲೆ ಗಮನ ಕೇಂದ್ರೀಕರಿಸಲಾಗಿದೆ ಎಂದರು.

ಈ ಮುನ್ನ ಈ ಯೋಜನೆಗೆ ಉದ್ಯೋಗ ಸಂಬಂಧಿತ ಪ್ರೋತ್ಸಾಹಕ ಯೋಜನೆ ಎಂದು ಹೆಸರಿಸಲಾಗಿತ್ತು. 2025ರ ಆಗಷ್ಟ್ 1 ರಂದು ಯೋಜನೆಯ ಹೆಸರನ್ನು ವಿಕಸಿತ ಭಾರತ ಉದ್ಯೋಗ ಯೋಜನೆ ಎಂಬ ಹೆಸರನ್ನು ನೀಡಲಾಗಿದ್ದು, ಆ.15ರ ಸ್ವಾತಂತ್ರ ದಿನಾಚರಣೆಯ ಭಾಷಣದ ವೇಲೆ ಪ್ರಧಾನಿ ನರೇಂದ್ರ ಮೋದಿ ಅವರು ಅಧಿಕೃತವಾಗಿ ಈ ಯೋಜನೆಯನ್ನು ಘೋಷಿಸಿದರು ಎಂದರು.

ಯೋಜನೆಯಡಿಯಲ್ಲಿ ಖಾಸಗಿ ವಲಯದಲ್ಲಿ ತಮ್ಮ ಮೊದಲ ಉದ್ಯೋಗವನ್ನು ಪಡೆಯುವ ಯುವ ಉದ್ಯೋಗಿಳು 15,000 ರೂಪಾಯಿಗಳ ಪ್ರೋತ್ಸಾಹವನ್ನು ಪಡೆಯುತ್ತಾರೆ. ಅದನ್ನು ನೇರವಾಗಿ ಅವರ ಬ್ಯಾಂಕ್ ಖಾತೆಗಳಿಗೆ ವರ್ಗಾಯಿಸಲಾಗುತ್ತದೆ. ಈ ಪ್ರೋತ್ಸಾಹಕವನ್ನು ಎರಡು ಕಂತುಗಳಲ್ಲಿ ವಿತರಿಸಲಾಗುತ್ತದೆ. ಮೊದಲನೆಯದು 6 ತಿಂಗಳ ಉದ್ಯೋಗವನ್ನು ಪೂರ್ಣಗೊಳಿಸಿದ ನಂತರ ಮತ್ತು ಎರಡನೆಯದು 12 ತಿಂಗಳುಗಳನ್ನು ಪೂರ್ಣಗೊಳಿಸಿದ ನಂತರ ನೀಡಲಾಗುತ್ತದೆ ಎಂದರು.




ಹೆಚ್ಚಿನ ಉದ್ಯೋಗಿಗಳನ್ನು ನೇಮಿಸಿಕೊಳ್ಳಲು ಕಂಪನಿಗಳನ್ನು ಪ್ರೋತ್ಸಾಹಿಸಲು, ಸರ್ಕಾರವು ಎರಡು ವರ್ಷಗಳ ಅವಧಿಗೆ ಪ್ರತಿ ಉದ್ಯೋಗಿಗೆ ತಿಂಗಳಿಗೆ 3,000 ರೂ. ಪ್ರೋತ್ಸಾಹವನ್ನು ನೀಡುತ್ತದೆ. ಭಾರತವನ್ನು ಉತ್ಪಾದನಾ ಕೇಂದ್ರವನ್ನಾಗಿ ಮಾಡುವ ಗುರಿಯೊಂದಿಗೆ ಈ ವಲಯದ ಕಂಪನಿಗಳು ಹೆಚ್ಚುವರಿ ಎರಡು ವರ್ಷಗಳವರೆಗೆ ಮೂರನೇ ಮತ್ತು ನಾಲ್ಕನೇ ವರ್ಷದ ಉದ್ಯೋಗ ಈ ಪ್ರೋತ್ಸಾಹವನ್ನು ಪಡೆಯುತ್ತವೆ ಎಂದರು.

ಅರ್ಹತಾ ಮಾನದಂಡಗಳು ಈ ಯೋಜನೆಯು ನೌಕರರ ಭವಿಷ್ಯನಿಧಿ ಸಘಟನೆಯಲ್ಲಿ 2ನೇಪುಟಕ್ಕೆ

ಮೊದಲನೇ ಪುಟದಿಂದ

# ರಾಜ್ಯದಲ್ಲಿ ಮಳೆ ಶೇ.21ರಷ್ಟು ಕೊರತೆ, ರೈತರಲ್ಲಿ ಆತಂಕ

ಗಡಿ ಪ್ರದೇಶ, ದಕ್ಷಿಣ ತಮಿಳುನಾಡು ಹಾಗೂ ಕೇರಳದ ಪಶ್ಚಿಮ ಘಟ್ಟಗಳ ಭಾಗದಲ್ಲಿ ಗುಡುಗು ಮಳೆ ತೀವ್ರಗೊಳ್ಳಲಿದೆ. ಇದರೊಂದಿಗೆ ಕರಾವಳಿ ಕರ್ನಾಟಕ, ಕರಾವಳಿ ಕೇರಳ ಮತ್ತು ಮುಂಬೈವರೆಗಿನ ಘಟ್ಟ ಪ್ರದೇಶಗಳಲ್ಲಿ ಮಳೆಯ ಪ್ರಮಾಣ ಸಾಧಾರಣವಾಗಿ ಹೆಚ್ಚಾಗಲಿದೆ.

ಹವಾಮಾನ ಇಲಾಖೆಯ ವಿವಿಧ ಮಾದರಿಗಳ ಪ್ರಕಾರ, ಜೂನ್ 29 ರಿಂದ ಜುಲೈ 5ರ ಅವಧಿಯಲ್ಲಿ ನೈಋತ್ಯ ಮುಂಗಾರು ಅಸಲಿ ಬಲ ಪಡೆದುಕೊಂಡು ಪುನಶ್ಚೇತನಗೊಳ್ಳುವ ಸಾಧ್ಯತೆಯಿದೆ. ದಕ್ಷಿಣ ಕೇರಳದ ಪಶ್ಚಿಮ ಘಟ್ಟಗಳು ಮತ್ತು ಕೊಂಕಣ ಕರಾವಳಿ ಭಾಗಗಳು ಮೊಟ್ಟಮೊದಲಿಗೆ ಭಾರಿ ಮಳೆಯ ಮುಂಗಾರು ಆರ್ಭಟಕ್ಕೆ ಸಾಕ್ಷಿಯಾಗಲಿವೆ. ಪ್ರಸ್ತುತ ಉಪಗ್ರಹ ಚಿತ್ರಗಳು ಮಳೆಯ ಮೋಡಗಳ ಕೊರತೆಯನ್ನು ತೋರಿಸುತ್ತಿದ್ದು, ಜೂನ್ ಕೊನೆಯ ವಾರದಲ್ಲಿ ಮುಂಗಾರು ಚುರುಕಾಗುವ ಪ್ರಕ್ರಿಯೆಯನ್ನು ಹವಾಮಾನ ವಿಶ್ಲೇಷಕರು ಸೂಕ್ಷ್ಮವಾಗಿ ಗಮನಿಸುತ್ತಿದ್ದಾರೆ. ಅಲ್ಲಿಯವರೆಗೂ ದೇಶವು ಮುಂಗಾರಿನ ಬದಲು ಸ್ಥಳೀಯ ಗುಡುಗು ಮಳೆಯನ್ನೇ ನೆಚ್ಚಿಕೊಳ್ಳಬೇಕಾಗಿದೆ.

ಕಾಟಾಚಾರ ಸಭೆಯಿಂದ ಬರ ಎದುರಿಸಲು ಆಗಲ್ಲ: ಅಶೋಕ್

"ರಾಜ್ಯದಲ್ಲಿ ಬರಗಾಲ ಎದುರಿಸಲು ಸಜ್ಜಾಗಿ" ಎಂದು ಮಾಧ್ಯಮಗಳಿಗೆ ಪೋಸ್ ಕೊಟ್ಟರೆ ಏನು ಪ್ರಯೋಜನವಿಲ್ಲ. ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಹೇಳಿರುವ ಪ್ರತಿಪಕ್ಷ ನಾಯಕ ಆರ್. ಅಶೋಕ್ ನೀವೇ ಒಪ್ಪಿಕೊಂಡಿರುವಂತೆ ರಾಜ್ಯದಲ್ಲಿ ಇನ್ನು ಶೇ. 30 ರಷ್ಟು ಮಳೆಯೂ ಆಗಿಲ್ಲ. ಪರಿಸ್ಥಿತಿ ಹೀಗಿರುವಾಗ ಬರೀ ಎಸಿ ಕೋಣೆಯಲ್ಲಿ ಕೂತು ಕಾಟಾಚಾರದ ಸಭೆ ನಡೆಸಿದರೆ, ಮಾಧ್ಯಮಗಳಿಗೆ ಒಂದು ಹಾರಿಕೆಯ ಹೇಳಿಕೆ ಕೊಟ್ಟುಬಿಟ್ಟರೆ ಬರ ನೀಗುತ್ತದೆಯೇ ಎಂದು ಪ್ರಶ್ನಿಸಿದ್ದಾರೆ.


ಬರಗಾಲ ಎದುರಿಸೋಕೆ, ರೈತರ ಕಷ್ಟ ಕೇಳೋಕೆ ರಾಜ್ಯದಲ್ಲಿ ಕೃಷಿ ಸಚಿವರು ಎಲ್ಲಿದ್ದಾರೆ ಸ್ವಾಮಿ
ಬರಪೀಡಿತ ತಾಲೂಕುಗಳಲ್ಲಿ ಜನ–ಜಾನುವಾರುಗಳು ಕುಡಿಯುವ ನೀರಿಲ್ಲದೆ ತತ್ತರಿಸುತ್ತಿದ್ದಾರೆ. ಈ ತಾಪತ್ರಯ ವಿಚಾರಿಸಬೇಕಾದ ನಿಮ್ಮ ಜಿಲ್ಲಾ ಉಸ್ತುವಾರಿ ಮಂತ್ರಿಗಳು ಎಲ್ಲಿದ್ದಾರೆ ಸ್ವಾಮಿ
ನಿಮ್ಮದೇ ಶಾಸಕರ ಮುನಿಸು, ಆಂತರಿಕ ಅಸಮಾಧಾನವನ್ನು ಎದುರಿಸಲಾಗದೆ ಮುಕ್ಕಾಲು ಸಂಪುಟವನ್ನು ಖಾಲಿ ಇಟ್ಟುಕೊಂಡಿರುವ ತಾವು ರಾಜ್ಯದ ಬರಗಾಲ ಎದುರಿಸುತ್ತೀರಿ ಎಂದು ಕನ್ನಡಿಗರು ಹೇಗೆ ತಾನೇ ನಂಬಿಯಾರು ಎಂದು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ.

ಅಧಿಕಾರದ ಹಪಾಹಪಿಗೆ ಬಿದ್ದು ಆಡಳಿತವನ್ನು ಸಂಪೂರ್ಣವಾಗಿ ಗಾಳಿಗೆ ತೂರಿದ ಕೇವಲ ಅಸಹಾಯಕ, ರಬ್ಬರ್ ಸ್ಟಾಂಪ್ ಮುಖ್ಯಮಂತ್ರಿಗಳಾಗಿ ನೀವು ಇತಿಹಾಸ ಸೇರುತ್ತೀರಿ. ಈ ಪೊಳ್ಳು ಹೇಳಿಕೆಗಳನ್ನು ಕೊಡುವುದು ಬಿಟ್ಟು, ತಕ್ಷಣವೇ ಪೂರ್ಣ ಪ್ರಮಾಣದ ಸಂಪುಟ ವಿಸ್ತರಣೆ ಮಾಡಿ ಬರ ಪರಿಹಾರ ಕಾರ್ಯಕ್ಕೆ ಮಂತ್ರಿಗಳನ್ನು ಹಳ್ಳಿ ಹಳ್ಳಿಗಳಿಗೆ ಇಳಿಸಿ, ಇಲ್ಲದಿದ್ದರೆ ಕನ್ನಡಿಗರ ಆಕ್ರೋಶ ಎದುರಿಸಬೇಕಾಗುತ್ತದೆ! ಎಂದು ಆರ್.ಅಶೋಕ್ ಹೇಳಿದ್ದಾರೆ.

## ಪ್ರಧಾನಮಂತ್ರಿ ವಿಕಸಿತ ಭಾರತ ಯೋಜನೆ ಉದ್ಯೋಗವನ್ನು ಹೆಚ್ಚಿಸುವ ಗುರಿ ಹೊಂದಿದೆ: ನಿರಾಜ್ ಕುಮಾರ್

ನೋಂದಾಯಿಸಿಕೊಂಡಿರುವ, ಮೊದಲ ಬಾರಿಗೆ ಖಾಸಗಿ ವಲಯದಲ್ಲಿ ಕೆಲಸ ಮಾಡುತ್ತಿರುವ ಮತ್ತು ಮಾಸಿಕ 1 ಲಕ್ಷ ರೂ.ದವರೆಗೆ ಸಂಬಳ ಹೊಂದಿರುವ ವ್ಯಕ್ತಿಗಳನ್ನು ಗುರಿಯಾಗಿರಿಸಿಕೊಂಡಿದೆ. ಉದ್ಯೋಗ ಸೃಷ್ಟಿಯನ್ನು ಮತ್ತಷ್ಟು ಉತ್ತೇಜಿಸಲು, ಸುಸ್ಥಿರ ಉದ್ಯೋಗವನ್ನು ಸೃಷ್ಟಿಸುವ ಕಂಪನಿಗಳಿಗೆ ಆರ್ಥಿಕ ಪ್ರೋತ್ಸಾಹಕಗಳನ್ನು ನೀಡಲಾಗುತ್ತದೆ ಎಂದರು.
ಉದ್ಯೋಗಿಯು 1 ಆಗಸ್ಟ್ 2025 ರಿಂದ 31 ಜುಲೈ 2025 ರ ನಡುವೆ ನೌಕರರ ಭವಿಷ್ಯ ನಿಧಿಗೆ ಸೇರಬೇಕು.
ಆಗಸ್ಟ್ 1, 2025ರ ಮೊದಲು ಅವರು ನೌಕರರ ಭವಿಷ್ಯ ನಿಧಿ ಸಂಘಟನೆಯ ಸದಸ್ಯರಾಗಿರಬಾರದು. ಆಗಸ್ಟ್ 2025 ಅಥವಾ ನಂತರ ಭವಿಷ್ಯನಿಧಿಯ ಕೊಡುಗೆಯನ್ನು ಪಡೆಯಬೇಕು. ಮಾಸಿಕ ಒಟ್ಟು ವೇತನವು ತಿಂಗಳಿಗೆ 1 ಲಕ್ಷ ರೂ. ಕ್ಕಿಂತ ಕಡಿಮೆಯಿರಬೇಕು ಎಂದರು.
ಜೂನ್ 19ರಂದು ಪ್ರಧಾನಿಮಂತ್ರಿ ಶ್ರೀ ನರೇಂದ್ರ ಮೋದಿ ಅವರು ನವದೆಹಲಿಯ ವಿಜ್ಞಾನ ಭವನದಿಂದ ಈ ಯೋಜನೆಯ ಫಲಾನುಭವಿಗಳೊಂದಿಗೆ ಸಂವಾದ ನಡೆಸಲಿದ್ದು, ದೇಶದ 200 ಸ್ಥಳಗಳನ್ನು ಈ ಕಾರ್ಯಕ್ರಮದ ನೇರ ಪ್ರಸಾರ ಇರಲಿದೆ. ಅಂದು ಈ ಕಾರ್ಯಕ್ರಮ ರಾಯಚೂರು ನಗರದ ನವೋದಯ ಇನ್ಸೂಟ್ ಆಫ್ ಟೆಕ್ನಾಲಜಿ ನಲ್ಲಿ ಈ ಕಾರ್ಯಕ್ರಮದ ನೇರ ಪ್ರಸಾರವಿದ್ದು, ಇದರಲ್ಲಿ ಜನಪ್ರತಿನಿಧಿಗಳು ಹಾಗೂ ಈ ಯೋಜನೆಯ ಫಲಾನುಭವಿಗಳು ಸೇರಿದಂತೆ ಇತರರು ಭಾಗಿಯಾಗಲಿದ್ದಾರೆ ಎಂದರು.
ಇದೇ ಸಂದರ್ಭದಲ್ಲಿ ಪ್ರಾದೇಶಿಕ ಸಹಾಯಕ ಭವಿಷ್ಯ ನಿಧಿ ಕಚೇರಿಯ ಲೆಕ್ಕಾಧಿಕಾರಿ ಪಿ.ರಾಘವೇಂದ್ರ, ಶರಣಬಸವ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಜಿ.ಸುರೇಶ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಜೀವನವಶ್ಯ ವಸ್ತುಗಳ ಬೆಲೆ ಇಳಿಕೆಗೆ ಒತ್ತಾಯಿಸಿ ರಾಷ್ಟ್ರಪತಿಗಳಿಗೆ ಮನವಿ




ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ಕ್ರಾಂತಿಕಾರಿ ಯುವಜನ ಸಂಘಟನೆ ತಾಲೂಕ ಸಮಿತಿ ವತಿಯಿಂದ ರಾಷ್ಟ್ರಪತಿಗಳಿಗೆ ಗ್ರೇಡ್–2 ತಹಶೀಲ್ದಾರ್ ಅಬ್ದುಲ್ ವಾಹಿದ್ ರವರ ಮೂಲಕ ಮನವಿ ಸಲ್ಲಿಸಿ ಸಿ.ಪಿ.ಐ ಎಂ.ಎಲ್. ಲಿಬರೇಶನ್ ಪಕ್ಷದ ಜಿಲ್ಲಾ ಮುಖಂಡರಾದ ಅಜೀಜ್ ಜಾಗೀರ್ದಾರ್ ಮಾತನಾಡಿ ಕೇಂದ್ರ ಸರಕಾರವು ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾತೈಲದ ಬೆಲೆ ಇಳಿಕೆಯಾಗಿದ್ದರೂ ಕೂಡ ಜನಸಾಮಾನ್ಯರಿಗೆ ಅಗತ್ಯವಾದ ಪೆಟ್ರೋಲ್, ಡೀಸೆಲ್ ಹಾಗೂ ಎಲ್‌ಪಿಜಿ ಗ್ಯಾಸ್ ಸಿಲೇಂಡರ್ ಬೆಲೆಗಳನ್ನು ನಿರಂತರವಾಗಿ ಹೆಚ್ಚಿಸುತ್ತಿರುವುದರಿಂದ ಜನಸಾಮಾನ್ಯರು,ಮಧ್ಯಮ ವರ್ಗದ ಕುಟುಂಬಗಳು ನಿತ್ಯ ಬಳಸುವ ಆಹಾರ ಪದಾರ್ಥಗಳು, ದಿನಸಿ ವಸ್ತುಗಳು, ಕೃಷಿ ಪರಿಕರಗಳು, ಸಾರಿಗೆ ವೆಚ್ಚ ಸೇರಿದಂತೆ ಎಲ್ಲ ಅಗತ್ಯ ವಸ್ತುಗಳ ಬೆಲೆಗಳು ಹೆಚ್ಚಳವಾಗಿವೆ ಇದ್ದರಿಂದ ಜನರು ಜೀವನ ನಡೆಸುವುದು ಕಷ್ಟವಾಗಿದೆ. ರೈತರಿಗೆ ಅಗತ್ಯ ಪ್ರಮಾಣದಲ್ಲಿ ರಸಗೊಬ್ಬರ ದೊರೆಯುತ್ತಿಲ್ಲ. ಉಜ್ವಲ ಯೋಜನೆಯ ಗ್ಯಾಸ್ ಸಿಲೆಂಡರ್‌ಗಳನ್ನು ಕಡಿತ ಮಾಡಲಾಗುತ್ತಿದೆ. ಕೇಂದ್ರ ಸರಕಾರದ ಜನವಿರೋಧಿ ನೀತಿಗಳನ್ನು ವಿರೋಧಿಸಿ ಮುಂದಿನ ದಿನಗಳಲ್ಲಿ ತೀವ್ರವಾದ ಹೋರಾಟವನ್ನು ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.
ಕ್ರಾಂತಿಕಾರಿ ಯುವಜನ ಸಂಘಟನೆ ತಾಲೂಕ ಸಮಿತಿ ಸಂಚಾಲಕರಾದ ರಾಜ ಸಾಬ್, ಜಲಾಲ್ ಪಾಶ, ಬಸಲಿಂಗಪ್ಪ, ರಂಗಪ್ಪ, ಉಡುಪಿ ಕೃಷ್ಣ, ಇಮ್ರಾನ್, ಸೈಯದ್ ಗೌಸ್, ರಮೇಶ್, ಚಂದ್ರಶೇಖರ್, ರಾಮಣ್ಣ, ನಾಗರಾಜ್, ಶಿವಣ್ಣ, ಆದಯ್ಯ, ಬೊಮ್ಮಯ್ಯಪ್ಪ ನಾಯಕ್, ಚಂದ್ರಶೇಖರ್ ಸೇರಿದಂತೆ ಇನ್ನಿತರರು ಇದ್ದರು.

## ಭೀಮ್ ಆರ್ಮಿ ಸಂಘಟನೆ ಜಿಲ್ಲಾ ಉಪಾಧ್ಯಕ್ಷರಾಗಿ ವೆಂಕಟೇಶ ಈರಲಗಡ್ಡಿ, ಮಾನ್ವಿ ತಾಲೂಕ ಅಧ್ಯಕ್ಷರಾಗಿ ಹನುಮಂತ ಜಾನೇಕಲ್ ನೇಮಕ

ಧೈರ್ಯದ ದಾರಿ



**ಮಾನವಿ :–** ಸಂವಿಧಾನ ಶಿಲ್ಪಿ, ಡಾಕ್ಟರ್ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ತತ್ವ ಸಿದ್ಧಾಂತಗಳನ್ನು ಪ್ರಚಾರ ಮಾಡುವ ಜೊತೆಗೆ ಅಂಬೇಡ್ಕರ್ ಅವರ ತತ್ವ ಸಿದ್ಧಾಂತಗಳಿಗೆ ಈ ದೇಶದ ಮೂಲ ನಿವಾಸಿ ಬಹುಜನ ಬಂಧುಗಳನ್ನು ಬಹುಜನ ಸಿದ್ಧಾಂತದ ಮೇಲೆ ಒಗ್ಗೂಡಿಸಿಕೊಂಡು ಸಾಗುತ್ತಿರುವ ಭೀಮ್ ಆರ್ಮಿ ಭಾರತ ಏಕತಾ ಮಿಷನ್ ಸಂಘಟನೆಯ ರಾಯಚೂರು ಜಿಲ್ಲಾ ಉಪಾಧ್ಯಕ್ಷರನ್ನಾಗಿ ವೆಂಕಟೇಶ ಈರಲಗಡ್ಡಿ, ಮಾನ್ವಿ ತಾಲೂಕಾಧ್ಯಕ್ಷರನ್ನಾಗಿ ಹನುಮಂತ ಜಾನೇಕಲ್ ಇವರನ್ನು ಭೀಮ್ ಆರ್ಮಿ ಸಂಘಟನೆಯ ಜಿಲ್ಲಾಧ್ಯಕ್ಷರಾದ ಪ್ರವೀಣ್ ಕುಮಾರ ಆದೇಶ ಪತ್ರ ನೀಡಿ ನೇಮಕ ಮಾಡಿದ್ದಾರೆ.

ರಾಯಚೂರಿನ ನೃಪತುಂಗ ಹೋಟೆಲ್ ಸಭಾಂಗಣದಲ್ಲಿ ಆಯ್ಕೆ ಮಾಡಿ ಬಳಿಕ ಮಾತನಾಡಿದ ಅವರು ನಮ್ಮ ಭೀಮ್ ಆರ್ಮಿ ಭಾರತ ಏಕತಾ ಮಿಷನ್ ಸಂಘಟನೆಯು ತನ್ನ ಹೋರಾಟಗಳನ್ನು ರಾಷ್ಟ್ರೀಯ ಸಂಘಟನಾ ಸಚಿವರಾದ ಯಶಪಾಲ್ ಬೋರೆ ಅವರ ಮಾರ್ಗದರ್ಶನದಲ್ಲಿ ಆರಂಭಿಸಿದ್ದು, ಈಗಾಗಲೆ ರಾಜ್ಯದ ಹಲವು ಜಿಲ್ಲೆಗಳಲ್ಲಿ ಅನ್ಯಾಯಕ್ಕೆ ಒಳಗಾದವರ ಪರವಾಗಿ ನಿಂತು ತನ್ನ ಹೋರಾಟವನ್ನು ಮಾಡುತ್ತಾ ಬಂದಿದೆ ಆಯ್ಕೆಯಾದ ಪದಾಧಿಕಾರಿಗಳಾದ ತಾವು ಕೂಡ ಕಾನೂನಿನ ಚೌಕಟ್ಟಿನ ಒಳಗಡೆ ಕೆಲಸ ಮಾಡಬೇಕೆಂದು ಆದೇಶಿಸಲಾಗಿದೆ.

ಈ ಸಂದರ್ಭದಲ್ಲಿ ಭೀಮ್ ಆರ್ಮಿ ಭಾರತ ಏಕತಾ ಮಿಷನ್ ಸಂಘಟನೆಯ ಜಿಲ್ಲಾ ಉಪಾಧ್ಯಕ್ಷರಾದ ಜಯರಾಜ್, ಜಿಲ್ಲಾ ಪದಾಧಿಕಾರಿಗಳಾದ ನವೀನ್ ಕುಮಾರ, ಉಮೇಶ್, ರಘು, ಮುನ್ನಾ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಜೂನ್ 20ರಂದು ಮಾಹಿತಿ ಹಕ್ಕು ಕಾಯ್ದೆ ಕುರಿತು ಕಾರ್ಯಾಗಾರ: ಅಧಿಕಾರಿಗಳು ಕಡ್ಡಾಯವಾಗಿ ಭಾಗಿಯಾಗುವಂತೆ ಜಿಲ್ಲಾಧಿಕಾರಿ ಸೂಚನೆ

ಧೈರ್ಯದ ದಾರಿ



**ರಾಯಚೂರು ಜೂನ್ 16 :** ಮಾಹಿತಿ ಹಕ್ಕು ಕಾಯ್ದೆ–2005ರ ಪರಿಣಾಮಕಾರಿ ಅನುಷ್ಠಾನ, ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಕರ್ತವ್ಯಗಳು ಹಾಗೂ ಮಾಹಿತಿ ಹಕ್ಕು ಸಂಬಂಧಿತ ವಿಷಯಗಳ ಕುರಿತು ಕಾರ್ಯಾಗಾರ ಮತ್ತು ಸಂವಾದ ಕಾರ್ಯಕ್ರಮದಲ್ಲಿ ರಾಯಚೂರು ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇದೇ ಜೂನ್ 20ರ ಬೆಳಿಗ್ಗೆ 10ಗಂಟೆಗೆ ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯ ಎಲ್ಲಾ ಇಲಾಖೆಗಳ ಅಧಿಕಾರಿಗಳು ಹಾಜರಾಗುವಂತೆ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್ ಅವರು ಕೋರಿದ್ದಾರೆ.
ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಬಿ. ವೆಂಕಟ ಸಿಂಗ್ ಹಾಗೂ ಬೆಂಗಳೂರು ಪೀಠದ ರಾಜ್ಯ ಮಾಹಿತಿ ಆಯುಕ್ತರುಗಳಾದ ರಾಮನ್ ಕೆ. ಮತ್ತು ಡಾ.ರಿಚರ್ಡ್ ವಿನ್ಸೆಂಟ್ ಡೊಸೋಜ ಅವರು ಜೂನ್.20ರ ಶನಿವಾರ ದಂದು ರಾಯಚೂರು ಜಿಲ್ಲೆಗೆ ಆಗಮಿಸಿ, ಮಾಹಿತಿ ಹಕ್ಕು ಕಾಯ್ದೆ–2005ರ ಪರಿಣಾಮಕಾರಿ ಅನುಷ್ಠಾನ, ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಕರ್ತವ್ಯಗಳು ಹಾಗೂ ಮಾಹಿತಿ ಹಕ್ಕು ಸಂಬಂಧಿತ ವಿಷಯಗಳ ಕುರಿತು ಕಾರ್ಯಾಗಾರ ಮತ್ತು ಸಂವಾದ ಕಾರ್ಯಕ್ರಮ ನಡೆಸಲಿದ್ದಾರೆ.
ಈ ಕಾರ್ಯಾಗಾರದಲ್ಲಿ ಜಿಲ್ಲೆಯ ಎಲ್ಲಾ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಅಧಿಕಾರಿಗಳು, ಕಂದಾಯ ಇಲಾಖೆಯ ಅಧಿಕಾರಿಗಳು, ತಾಲೂಕು ಮಟ್ಟದ ಅಧಿಕಾರಿಗಳು, ಪೊಲೀಸ್ ಇಲಾಖೆಯ ಅಧಿಕಾರಿಗಳು, ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು (ಪಿಡಿಒ), ಗ್ರಾಮ ಪಂಚಾಯತ್ ಕಾರ್ಯದರ್ಶಿಗಳು ಹಾಗೂ ಎಲ್ಲಾ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಕಡ್ಡಾಯವಾಗಿ ನಿಗದಿತ ಸಮಯಕ್ಕೆ ಕಾರ್ಯಾಗಾರದಲ್ಲಿ ಭಾಗವಹಿಸುವಂತೆ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರ್ನಾಟಕದಲ್ಲಿ ಕರ್ತವ್ಯ ಕ್ರಾಂತಿ: ಸ್ವದೇಶಿ ಎಐ ತಂತ್ರಜ್ಞಾನದ ಹೊಸ ಹೆಜ್ಜೆ

ಧೈರ್ಯದ ದಾರಿ

**ರಾಯಚೂರು ಜೂನ್ 16 :** ರಾಜ್ಯ ಸಾರ್ವಜನಿಕ ಆಡಳಿತದಲ್ಲಿ ಪಾರದರ್ಶಕತೆ, ಹೊಣೆಗಾರಿಕೆ ಮತ್ತು ದಕ್ಷತೆಯನ್ನು ಹೆಚ್ಚಿಸಲು ಕರ್ನಾಟಕ ಸರ್ಕಾರವು ಕರ್ತವ್ಯ (KAAMS – Karnataka Advanced Attendance Management System) ಎಂಬ ನೂತನ ಮುಂದುವರಿದ ಹಾಜರಾತಿ ನಿರ್ವಹಣಾ ತಂತ್ರಜ್ಞಾನವನ್ನು ಜಾರಿಗೆ ತಂದಿದೆ.
ಮಾನ್ಯ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ಇಲಾಖಾ ಕಾರ್ಯದರ್ಶಿಗಳೊಂದಿಗೆ ನಡೆಸಿದ ಮೊದಲ ಸಭೆಯಲ್ಲೇ ಸರ್ಕಾರಿ ನೌಕರರು ಹಾಗೂ ಅಧಿಕಾರಿಗಳು ಕಚೇರಿ ವೇಳೆಯಲ್ಲಿ ಕಡ್ಡಾಯವಾಗಿ 100% ಹಾಜರಿರಬೇಕು ಮತ್ತು ಸಾರ್ವಜನಿಕರ ಕುಂದುಕೊರತೆಗಳಿಗೆ ತಕ್ಷಣ ಸ್ಪಂದಿಸಬೇಕು ಎಂದು ಖಡಕ್ ಸೂಚನೆ ನೀಡಿದ್ದರು.
ಈ ಹಿಂದೆ ಜಾರಿಯಲ್ಲಿದ್ದ ಬಯೋಮೆಟ್ರಿಕ್ ವ್ಯವಸ್ಥೆಯಲ್ಲಿ ಉದ್ಯೋಗಿಗಳು ಕೇವಲ ಡಿಜಿಟಲ್ ಸಹಿ ಮಾಡಿ ಕಚೇರಿಯಿಂದ ಗೈರಾಗುವ ಸಾಧ್ಯತೆಗಳಿದ್ದವು. ಈ ದೋಷವನ್ನು ನಿವಾರಿಸಲು, ಉದ್ಯೋಗಿಗಳ ಭೌತಿಕ ಉಪಸ್ಥಿತಿ ಮತ್ತು ಕಚೇರಿಯ ಭೌಗೋಳಿಕ ಸ್ಥಳವನ್ನು (Geographical Location) ನಿಖರವಾಗಿ ಪತ್ತೆಹಚ್ಚುವ ಈ ಹೊಸ ವ್ಯವಸ್ಥೆಯನ್ನು ರೂಪಿಸಲಾಗಿದೆ.
ಸಂಪೂರ್ಣ "ಮೇಡ್–ಇನ್–ಕರ್ನಾಟಕ" ಆವಿಷ್ಕಾರ: ಯಾವುದೇ ಬಾಹ್ಯ ಖಾಸಗಿ ತಂತ್ರಜ್ಞಾನ ಸಂಸ್ಥೆಗಳ ನೆರವಿಲ್ಲದೆ, ಸಂಪೂರ್ಣವಾಗಿ ಸರ್ಕಾರದ ಪರಿಸರ ವ್ಯವಸ್ಥೆಯಲ್ಲೇ "ಕರ್ತವ್ಯ" ಸಾಫ್ಟ್‌ವೇರ್ ಅನ್ನು ವಿನ್ಯಾಸಗೊಳಿಸಿ ಅಭಿವೃದ್ಧಿಪಡಿಸಲಾಗಿದೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಇ–ಆಡಳಿತ) ಉಸ್ತುವಾರಿಯಲ್ಲಿ, ಸೆಂಟರ್ ಫಾರ್ ಇ–ಗವರ್ನೆನ್ಸ್ (CeG) ಮತ್ತು ಕರ್ನಾಟಕ ಎಐ ಸೆಲ್ (Karnataka AI Cell) ಜಂಟಿಯಾಗಿ ಇದನ್ನು ಸಿದ್ಧಪಡಿಸಿವೆ. ಇದರಿಂದಾಗಿ ಸರ್ಕಾರದ ಬೊಕ್ಕಸಕ್ಕೆ ಕೋಟ್ಯಂತರ ರೂಪಾಯಿ ವೆಂಡರ್ ವೆಚ್ಚ ಉಳಿತಾಯವಾಗಿದ್ದು, ದತ್ತಾಂಶ ಸುರಕ್ಷತೆ ಮತ್ತು ಸ್ವಾಯತ್ತತೆ ಹೆಚ್ಚಾಗಿದೆ. ಕರ್ನಾಟಕದ ಈ ಯಶಸ್ವಿ ಮಾದರಿಯನ್ನು ದೇಶದ ಇತರೆ ರಾಜ್ಯಗಳೂ ಅಳವಡಿಸಿಕೊಳ್ಳಬಹುದಾಗಿದೆ.
ತಂತ್ರಜ್ಞಾನದ ಪ್ರಮುಖ ವೈಶಿಷ್ಟ್ಯಗಳು: ಕೃತಕ ಬುದ್ಧಿಮತ್ತೆ (AI) ಆಧಾರಿತ ಮುಖ ಗುರುತಿಸುವಿಕೆ – ವಂಚನೆಯ ಹಾಜರಾತಿಯನ್ನು ತಡೆಯಲು ಲೈವ್‌ನೆಸ್ ಡಿಟೆಕ್ಷನ್ (Liveness Detection) ತಂತ್ರಜ್ಞಾನದೊಂದಿಗೆ ಎಐ ಫೇಶಿಯಲ್ ರೆಕಗ್ನಿಷನ್ ಬಳಸಲಾಗಿದೆ.
ಜಿಯೋಫೆನ್ಸಿಂಗ್ (Geofencing) – ಜಿಐಎಸ್ (GIS) ತಂತ್ರಜ್ಞಾನದ ಮೂಲಕ ಉದ್ಯೋಗಿ ತನ್ನ ಕಚೇರಿಯ ನಿಗದಿತ ಪರಿಧಿಯೊಳಗೆ ಇದ್ದಾಗ ಮಾತ್ರ ಹಾಜರಾತಿ ದಾಖಲಿಸಲು ಸಾಧ್ಯವಾಗುತ್ತದೆ.

ಸಂಯೋಜಿತ ಡೇಟಾಬೇಸ್ – ಇದನ್ನು ಆಧಾರ್ ಇ–ಕೆವೈಸಿ (e-KYC) ಮತ್ತು ಮಾನವ ಸಂಪನ್ಮೂಲ ನಿರ್ವಹಣಾ ವ್ಯವಸ್ಥೆ (HRMS) ಯೊಂದಿಗೆ ಸಂಯೋಜಿಸಲಾಗಿದೆ.
ಮೊಬೈಲ್ ಆಪ್ ಮತ್ತು ರಜೆ ನಿರ್ವಹಣೆ – ಆಂಡ್ರಾಯ್ಡ್ ಮತ್ತು ಐಒಎಸ್ ಆಪ್‌ಗಳ ಮೂಲಕ ಹಾಜರಾತಿ, ರಜೆ ಮತ್ತು ಅಧಿಕೃತ ಹೊರಗಿನ ಕೆಲಸದ (OOD) ವಿವರಗಳನ್ನು ದಾಖಲಿಸುವ ಸೌಲಭ್ಯವಿದೆ.
ಇಲಾಖೆಗಳಲ್ಲಿ ದಾಖಲೆ ವೇಗದ ಅನುಷ್ಠಾನ ಮುಖ್ಯಮಂತ್ರಿಗಳ ಕಟ್ಟುನಿಟ್ಟಿನ ಆದೇಶದ ಬೆನ್ನಲ್ಲೇ ಈ ತಂತ್ರಜ್ಞಾನವು ಇಲಾಖೆಗಳಲ್ಲಿ ಅತ್ಯಂತ ವೇಗವಾಗಿ ಅನುಷ್ಠಾನಗೊಳ್ಳುತ್ತಿದೆ.
ಕಳೆದ ವಾರ ಅಂದಾಜು 2,46,000 ರಷ್ಟಿದ್ದ ಒಟ್ಟು ನೋಂದಾಯಿತ ಉದ್ಯೋಗಿಗಳ ಸಂಖ್ಯೆ ಪ್ರಸ್ತುತ ವಾರದಲ್ಲಿ 3,01,034 ಕ್ಕೆ ಏರಿಕೆಯಾಗಿದೆ. ಇದು ಕೇವಲ ಒಂದೇ ವಾರದಲ್ಲಿ ಶೇಕಡಾ 25% ಕ್ಕಿಂತಲೂ ಹೆಚ್ಚು (55,000ಕ್ಕೂ ಅಧಿಕ ಹೊಸ ಸೇರ್ಪಡೆ) ಬೆಳವಣಿಗೆಯಾಗಿದೆ. ಇದೇ ಅವಧಿಯಲ್ಲಿ, ಆಪ್ ಮೂಲಕ ಪ್ರತಿದಿನ ದಾಖಲಾಗುವ ದೈನಂದಿನ ಹಾಜರಾತಿ ಸಂಖ್ಯೆಯು ಸಹ 1,85,308 ರಿಂದ 2,32,612 ಕ್ಕೆ ಜಿಗಿದಿದ್ದು, ಸಕ್ರಿಯ ಬಳಕೆಯಲ್ಲಿ ಶೇಕಡಾ 25% ರಷ್ಟು ಭಾರಿ ಏರಿಕೆ ದಾಖಲಾಗಿದೆ.
ಪ್ರಸ್ತುತ 42 ಇಲಾಖೆಗಳ 4,78,522 ನೌಕರರನ್ನು ಈ ವ್ಯವಸ್ಥೆಗೆ ಒಳಪಡಿಸಲಾಗಿದ್ದು, ಈ ಪೈಕಿ 3.01 ಲಕ್ಷಕ್ಕೂ ಹೆಚ್ಚು ಉದ್ಯೋಗಿಗಳು ಈಗಾಗಲೇ ನೋಂದಾಯಿಸಿಕೊಂಡಿದ್ದಾರೆ. ಕೇವಲ ಒಂದೇ ವಾರದಲ್ಲಿ ನೋಂದಣಿ ಪ್ರಕ್ರಿಯೆಯಲ್ಲಿ ಶೇಕಡಾ 25 ರಷ್ಟು ಅಭೂತಪೂರ್ವ ಪ್ರಗತಿ ಕಂಡುಬಂದಿದೆ.
ಶಾಲಾ ಶಿಕ್ಷಣ ಇಲಾಖೆ: ಒಟ್ಟು 1,76,055 ಉದ್ಯೋಗಿಗಳಲ್ಲಿ ಈಗಾಗಲೇ 1,68,252 ನೌಕರರು ನೋಂದಾಯಿಸಿಕೊಂಡಿದ್ದು, 1,41,800ಕ್ಕೂ ಹೆಚ್ಚು ದೈನಂದಿನ ಚೆಕ್–ಇನ್‌ಗಳೊಂದಿಗೆ ಮೊದಲ ಸ್ಥಾನದಲ್ಲಿದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ: 66,969 ನೋಂದಣಿ ಹಾಗೂ 54,400ಕ್ಕೂ ಹೆಚ್ಚು ದೈನಂದಿನ ಹಾಜರಾತಿಯೊಂದಿಗೆ ಎರಡನೇ ಸ್ಥಾನದಲ್ಲಿದೆ.
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಶಾಲಾ ಶಿಕ್ಷಣ ಇಲಾಖೆಗಳಲ್ಲಿ ಪ್ರಾಯೋಗಿಕವಾಗಿ ಯಶಸ್ವಿಯಾದ ನಂತರ, ಶಾಲಾ ಶಿಕ್ಷಣ ಇಲಾಖೆಯ ಸಿಬ್ಬಂದಿ ಇದನ್ನು ಸಕ್ರಿಯವಾಗಿ ಬಳಸುತ್ತಿದ್ದಾರೆ. ಇನ್ನುಳಿದ ಹಲವು ಇಲಾಖೆಗಳು ಈಗಾಗಲೇ ಶೇಕಡಾ 90 ಕ್ಕಿಂತ ಹೆಚ್ಚು ನೋಂದಣಿ ಮೈಲಿಗಲ್ಲನ್ನು ದಾಟಿವೆ.
ಇತರ ಇಲಾಖೆಗಳು: ಪದವಿ ಪೂರ್ವ ಮಂಡಳಿ, ಆಯುಷ್ (AYUSH), ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಮತ್ತು ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಗಳು ಈಗಾಗಲೇ 90% ಕ್ಕಿಂತ ಹೆಚ್ಚು ನೋಂದಣಿ ಗುರಿಯನ್ನು ಯಶಸ್ವಿಯಾಗಿ ತಲುಪಿವೆ.
ಮುಖ್ಯಮಂತ್ರಿಗಳು, ಮುಖ್ಯ ಕಾರ್ಯದರ್ಶಿಗಳು ಮತ್ತು ಜಿಲ್ಲಾ ಮಟ್ಟದಲ್ಲಿ ಡಿಸಿ/ಸಿಇಒಗಳು ದಿನನಿತ್ಯ ಈ ವ್ಯವಸ್ಥೆಯ ಡ್ಯಾಶ್‌ಬೋರ್ಡ್ ಅನ್ನು ಮೇಲ್ವಿಚಾರಣೆ ಮಾಡುತ್ತಿದ್ದಾರೆ. ಕಚೇರಿ ಅವಧಿಯಲ್ಲಿ ಅಧಿಕಾರಿಗಳು ಸಾರ್ವಜನಿಕರಿಗೆ ಸಿಗದಿರುವ ಬಗ್ಗೆ ನಾಗರಿಕರು ನೀಡುವ ಪ್ರತಿಕ್ರಿಯೆ (Feedback) ಈ ಸುಶಾಸನದ ಗುರಿಯನ್ನು ತಲುಪಲು ಪ್ರಮುಖ ಪಾತ್ರ ವಹಿಸಲಿದೆ.
ಸಾರ್ವಜನಿಕರಿಗೆ ಸಿಗಲಿದೆ ಉತ್ತಮ ಸೇವೆ: ಸಾರ್ವಜನಿಕ ಸೇವೆಗೆ ಹೊಸ ವೇಗ ಮೊಬೈಲ್ ಮೂಲಕವೇ ಹಾಜರಾತಿ ದಾಖಲಿಸುವ ಸೌಲಭ್ಯ ಇರುವುದರಿಂದ ಕಚೇರಿಗಳ ಮುಂಭಾಗದಲ್ಲಿ ಬಯೋಮೆಟ್ರಿಕ್‌ಗಾಗಿ ಸಾಲಿನಲ್ಲಿ ನಿಲ್ಲುವುದು ತಪ್ಪಿದೆ ಎಂದು ಸರ್ಕಾರಿ ನೌಕರರು ಸಂತಸ ವ್ಯಕ್ತಪಡಿಸಿದ್ದಾರೆ. ಕರ್ತವ್ಯ ಫ್ ಪ್ರತಿಯೊಬ್ಬ ಸರ್ಕಾರಿ ನೌಕರನೂ ತನ್ನ ಜವಾಬ್ದಾರಿಯನ್ನು ಹೆಮ್ಮೆ, ಶಿಸ್ತು ಮತ್ತು ನಿರ್ದಿಷ್ಟ ಉದ್ದೇಶದೊಂದಿಗೆ ನಿರ್ವಹಿಸಲು ಶಕ್ತಿ ತುಂಬುತ್ತಿದೆ.

ಅಂತಿಮವಾಗಿ, ಕಚೇರಿಗಳಲ್ಲಿ ಅಧಿಕಾರಿಗಳ ಭೌತಿಕ ಲಭ್ಯತೆ ಮತ್ತು ವಿಶ್ವಾಸಾರ್ಹತೆಯನ್ನು ಖಾತರಿಪಡಿಸುವ ಮೂಲಕ ಸಾರ್ವಜನಿಕರಿಗೆ ಸಿಗುವ ಸೇವೆಗಳು ಇನ್ನು ಮುಂದೆ ಹೆಚ್ಚು ಸುಲಭ ಹಾಗೂ ತಡೆರಹಿತವಾಗಲಿವೆ. ಈ ಮೂಲಕ ಕರ್ನಾಟಕವು ಡಿಜಿಟಲ್ ಆಡಳಿತ ಮತ್ತು ನಾಗರಿಕ ಕೇಂದ್ರಿತ ಸುಧಾರಣೆಯಲ್ಲಿ ದೇಶದಲ್ಲೇ ಮುಂಚೂಣಿ ರಾಜ್ಯವಾಗಿ ಹೊರಹೊಮ್ಮಿದೆ ಎಂದು ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# " ಅಮ್ಮ " ಪ್ರೀತಿಯ ಸಾಕಾರ ಮೂರ್ತಿ

ಜಗತ್ತಿನಲ್ಲಿ ಅತಿ ಪವಿತ್ರವಾದ, ಬೆಲೆಕಟ್ಟಲಾಗದ ಮತ್ತು ಅತ್ಯಂತ ಸುಂದರವಾದ ಪದ ಎಂದರೆ ಅದು "ಅಮ್ಮ". ಒಬ್ಬ ಮಗುವಿಗೆ ಈ ಸೃಷ್ಟಿಯನ್ನು ಪರಿಚಯಿಸುತ್ತಾ ಜನ್ಮ ನೀಡುವ ತಾಯಿಯೇ ಪ್ರತಿಯೊಬ್ಬರ ಜೀವನದ ಮೊದಲ ಗುರು, ದೈವ ಮತ್ತು ಮಾರ್ಗದರ್ಶಿ. ಅಮ್ಮನ ಬಗ್ಗೆ ಬರೆಯಲು ಪದಗಳು ಸಾಲುವುದಿಲ್ಲ, ಅವಳ ತ್ಯಾಗ, ಪ್ರೀತಿ ಮತ್ತು ಕರುಣೆ ಅಪಾರವಾದದ್ದು.

**1 ನಿಸ್ವಾರ್ಥ ಪ್ರೀತಿಯ ಸಂಕೇತ :**
ಅಮ್ಮನ ಪ್ರೀತಿಯಲ್ಲಿ ಯಾವುದೇ ಸ್ವಾರ್ಥವಿರುವುದಿಲ್ಲ. ತಾನು ಹಸಿದಿದ್ದರೂ ಮಗುವಿನ ಹೊಟ್ಟೆ ತುಂಬಿಸುವವಳೇ ತಾಯಿ. ಮಗುವಿಗೆ ಸಣ್ಣ ಜ್ವರ ಬಂದರೆ ಇಡೀ ರಾತ್ರಿ ನಿದ್ದೆಗೆಟ್ಟು ಜಾಗರಣೆ ಮಾಡುವ ಜಗತ್ತಿನ ಏಕೈಕ ಜೀವಿ ಎಂದರೆ ಅದು ಅಮ್ಮ ಮಾತ್ರ. ಮಕ್ಕಳ ಸಂತೋಷದಲ್ಲೇ ತನ್ನ ಸಂತೋಷವನ್ನು ಕಾಣುವವಳು ಅಮ್ಮ.

**2 ಜೀವನದ ಮೊದಲ ಗುರು :**
ಮಗು ಮೊದಲು ಕಲಿಯುವ ಮಾತು ಅಮ್ಮ. ನಡೆಯುವುದನ್ನು, ಮಾತನಾಡುವುದನ್ನು ಮತ್ತು ಸರಿ ತಪ್ಪುಗಳ ನಡುವಿನ ವ್ಯತ್ಯಾಸವನ್ನು ತಿಳಿಸಿಕೊಡುವ ಮೊದಲ ಗುರು ಹೆತ್ತ ತಾಯಿ. ಸಂಸ್ಕಾರ ಮತ್ತು ನೈತಿಕ ಮೌಲ್ಯಗಳನ್ನು ಬಾಲ್ಯದಲ್ಲೇ ಬಿತ್ತಿ ನಮ್ಮನ್ನು ಸಮಾಜದಲ್ಲಿ ಉತ್ತಮ ಪ್ರಜೆಯನ್ನಾಗಿ ರೂಪಿಸುವಲ್ಲಿ ಅವಳ ಪಾತ್ರ ದೊಡ್ಡದಿದೆ.
3. "ಮೌನವಾಗಿ ಸಹಿಸುವ ತ್ಯಾಗಮಯಿ": ನಮ್ಮ ಏಳಿಗೆಗಾಗಿ ತನ್ನ ಎಷ್ಟೋ ಆಸೆ ಆಕಾಂಕ್ಷೆಗಳನ್ನು ಮೌನವಾಗಿ ತ್ಯಾಗ ಮಾಡುತ್ತಾಳೆ ಕುಟುಂಬದ ಪ್ರತಿಯೊಬ್ಬರ ಜವಾಬ್ದಾರಿಗಳನ್ನು ಹೊತ್ತು ಯಾವುದೇ ವಿಶ್ರಾಂತಿ ಇಲ್ಲದೆ 24 ಗಂಟೆಯೂ ದುಡಿಯುವ ಅವಳಿಗೆ ಸುಸ್ತು ಎಂಬುವುದೇ ತಿಳಿಯದು ನಮಗಾಗಿ ಅವಳು ಪಡುವ ಕಷ್ಟಗಳನ್ನು ಎಂದಿಗೂ ಮುಖದಲ್ಲಿ ತೋರಿಸಿಕೊಳ್ಳುವುದಿಲ್ಲ
4. "ಧೈರ್ಯ ತುಂಬುವ ಶಕ್ತಿ": ನಾವು ಜೀವದಲ್ಲಿ ಸೋತಾಗ ದಾರಿ ಕಾಣದೆ ನಿಂತಾಗ "ನಾನಿದ್ದೇನೆ" ಎಂದು ಬೆನ್ನುತಟ್ಟಿ ಧೈರ್ಯ ತುಂಬುವ ಶಕ್ತಿ ಅಮ್ಮ ಜಗತ್ತೆ ನಮಗೆ ಎದುರಾದರೂ ನಿಂತರು ನಮ್ಮನ್ನು ನಂಬಿ ನಮ್ಮ ಪರವಾಗಿ ನಿಲ್ಲುವ ಏಕೈಕ ಹೃದಯ ತಾಯಿಯದು ಎಂದಿಗೂ ಮಕ್ಕಳನ್ನು ಬಿಟ್ಟುಕೊಡದ ಮತ್ತು ಮಕ್ಕಳ ಪರವಾಗಿ ಮಾತನಾಡುವ ಜೀವ ಅಮ್ಮ
5. "ಕುಟುಂಬವನ್ನು ಸರಿದೂಗಿಸುವ ಸೂತ್ರಧಾರಿ": ಒಂದು ಮನೆಯನ್ನು "ಮನೆಯನ್ನಾಗಿ" ಮಾಡುವುದು ಅಮ್ಮ ಅವಳಿಲ್ಲದೆ ಮನೆ "ಚಂದಿರನಿಲ್ಲದ ಆಕಾಶದಂತೆ "ಕತ್ತಲೆಯ ಗೂಡು" ಅಂತೆ ಭಾಸವಾಗುತ್ತದೆ. ತಂದೆ ಮಕ್ಕಳು ಗಂಡ ಮಾವ ಅತ್ತೆ ಹೀಗೆ ಎಲ್ಲರ



ಇಷ್ಟ ಕಷ್ಟಗಳನ್ನು ಅರಿತು ಇಡೀ ಕುಟುಂಬವನ್ನು ಒಂದೇ ಸೂತ್ರದಲ್ಲಿ ಬೆಸೆಯುವ ಶಕ್ತಿ ತಾಯಿಗಿದೆ . ಮನೆಯ ಆರ್ಥಿಕ ಪರಿಸ್ಥಿತಿ ಏನೇ ಇರಲಿ ಅದಕ್ಕೆ ತಕ್ಕಂತೆ ಸಂಸಾರವನ್ನು ನಿಭಾಯಿಸುವ ಅದ್ಭುತ management ಕಲೆ ಅಮ್ಮನಿಗಿದೆ ಯಾವುದೇ ಶಿಕ್ಷಣ ಇಲ್ಲದಿದ್ದರೂ ನಿಭಾಯಿಸುವ ಸಾಮರ್ಥ್ಯ ಹೊಂದಿರುವವಳು
6. "ಕಣ್ಣಿಗೆ ಕಾಣುವ ಪ್ರತಕ್ಷ ದೈವ "(ದೇವತೆ): ನಾವು ಕಾಣದ ದೇವರಿಗೆ ಕೈಮುಗಿಯುತ್ತೇವೆ ಆದರೆ ನಮ್ಮ ಕಣ್ಣೆದುರೆ ಇರುವ ದೈವ ಎಂದರೆ ತಾಯಿ . ತಾಯಿಯ ಸೇವೆ ಮಾಡುವುದು ಕೋಟಿ ದೇವರ ಪೂಜೆಗೆ ಸಮಾನ ಅದಕ್ಕೆ ಸಂಸ್ಕೃತದಲ್ಲಿ *ಮಾತೃ ದೇವೋಭವ* ಎಂದು ಎಲ್ಲದಕ್ಕಿಂತ ಮೊದಲು ತಾಯಿಗೆ ಮೊದಲ ಸ್ಥಾನ ನೀಡಲಾಗಿದೆ ಜಗತ್ತಿನ ಎಲ್ಲಾ ಸಂಭಂದಗಳಲ್ಲೂ ಏರಿಳಿತ ಇರಬಹುದು ಆದರೆ ತಾಯಿಯ ಪ್ರೀತಿ ಮಾತ್ರ ಎಂದಿಗೂ ಬದಲಾಗದ *ಅಮೃತಧಾರೆ*
7. "ನೆರಳಿನಂತೆ ಕಾಯುವ ರಕ್ಷಕಿ": ಮಗುವಿಗೆ ಯಾವುದೇ ಅಪಾಯ ಬಾರದಂತೆ ತನ್ನ ರೆಕ್ಕೆಯಡಿಯಲ್ಲಿ ( ತನ್ನ ತೋಳುಗಳಲ್ಲಿ) ಕೋಳಿಯೂ ಮರಿಗಳನ್ನು ಕಾಯುವಂತೆ ಹಸುವು ತನ್ನ ಕರುವನ್ನು ರಕ್ಷಿಸುವಂತೆ ಅಮ್ಮ ನಮ್ಮನು ರಕ್ಷಿಸುತ್ತಾಳೆ ನಮಗೆ ಎದುರಾಗುವ ಕಷ್ಟಗಳು ತಾನು ಎದುರಿಸಿ ನಮಗೆ ಸದಾ ನೆರಳಾಗಿ ನಿಲ್ಲುತ್ತಾಳೆ ನಮ್ಮ ಮುಖದಲ್ಲಿ ಸಣ್ಣ ಬೇಸರ ಕಂಡರು ತಾನು ಬೇಸರ ವಾಗುವ ಏಕೈಕ ಜೀವ ತಾಯಿ ಮಾತ್ರ
*"ವಿಶ್ವದ ಅತ್ಯಂತ ಸುಂದರವಾದ ನೋಟವೆಂದರೆ ಅದು ಅಮ್ಮನ ಮುಖದ ಮೇಲಿನ ನಗು"*
*"ನಮ್ಮ ತಪ್ಪುಗಳನ್ನು ಸುಲಭವಾಗಿ ಕ್ಷಮಿಸಿ ಮತ್ತೆ ಪ್ರೀತಿಯಿಂದ ಹರಸುವ ಏಕೈಕ ನ್ಯಾಯಾಲಯ ಎಂದರೆ ತಾಯಿಯ ಹೃದಯ"*

ಹಣದಿಂದ ಜಗತ್ತಿನಲ್ಲಿ ಎಲ್ಲವನ್ನೂ ಖರೀದಿಸಬಹುದು ಆದರೆ ಅಮ್ಮನ ಮಡಿಲು ಅವಳ ಪ್ರೀತಿಯನ್ನು ಕೋಟಿ ಕೊಟ್ಟರು ಖರೀದಿಸಲು ಸಾಧ್ಯವಿಲ್ಲ .

**"ನಮ್ಮ ಜವಾಬ್ದಾರಿ ಏನು"**
ಇಂದಿನ ಆಧುನಿಕ ಜಗತ್ತಿನಲ್ಲಿ ಎಷ್ಟೋ ತಾಯಂದಿರು ವೃದ್ಧಾಶ್ರಮ ಸೇರುತ್ತಿರುವುದು ಅತ್ಯಂತ ನೋವಿನ ಸಂಗತಿ ನಮಗೆ ಜನ್ಮ ನೀಡಿ ಸಾಕಿ ಸಲಹಿದ ತಾಯಿಯನ್ನು ನೋಡಿಕೊಳ್ಳುವುದು ನಮ್ಮ ಪರಮ ಧರ್ಮ ಅವಳ ಮುಖದಲ್ಲಿ ಸದಾ ನಗು ಇರುವಂತೆ ನೋಡಿಕೊಳ್ಳುವುದು ನಾವು ಅವಳಿಗೆ ಸಲ್ಲಿಸಬಹುದಾದ ನಿಜವಾದ ಕೃತಜ್ಞತೆ ದೇವರಿಗಿಂತ ಮಿಗಿಲಾದದ್ದು ತಾಯಿಯ ಪ್ರೀತಿ



**–ಗಂಗಾಶ್ರೀ ವಿಶ್ವಕರ್ಮ ಮಾನ್ವಿ**

## ಹೊನ್ನುರಸ್ವಾಮಿ ಕೆ.ಟಿ. ಅವರಿಗೆ "ನಿರ್ಭೀತ ವರದಿಗಾರ ರತ್ನ" ಪ್ರಶಸ್ತಿ ಪ್ರದಾನ



**ಬಳ್ಳಾರಿ, ಜೂ, 14:** ನಗರದ ಬಾಲ ಹೋಟೆಲ್ನಲ್ಲಿ ಸೂರ್ಯ ನ್ಯೂಸ್ ಕನ್ನಡ ಮಾಧ್ಯಮದ ವತಿಯಿಂದ ಭಾನುವಾರ ಅದ್ದೂರಿಯಾಗಿ ಆಯೋಜಿಸಲಾದ ವಾರ್ಷಿಕೋತ್ಸವ ಹಾಗೂ ಸಾಧಕರ ಸನ್ಮಾನ ಸಮಾರಂಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆಗೈದ ಗಣ್ಯರನ್ನು ಗೌರವಿಸಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಕಾರ್ಯಕ್ರಮವನ್ನು ಸೂರ್ಯ ನ್ಯೂಸ್ ಕನ್ನಡದ ಸಂಪಾದಕರಾದ ಹೇಮಂತ್ ರಾಜ್ ಅವರು ಅಚ್ಚುಕಟ್ಟಾಗಿ ನಿರ್ವಹಿಸಿ, ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಸಾಧಕರನ್ನು ಗುರುತಿಸಿ ಸನ್ಮಾನಿಸುವ ಮೂಲಕ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ತಂದರು.

ಈ ಸಂದರ್ಭದಲ್ಲಿ ಸಮಾಜಮುಖಿ ಪತ್ರಿಕೋದ್ಯಮ, ಜನಪರ ಹೋರಾಟಗಳು ಹಾಗೂ ನಿರಂತರ ಮಾಧ್ಯಮ ಸೇವೆಯ ಮೂಲಕ ಗುರುತಿಸಿಕೊಂಡಿರುವ ಸಿಂಧೂರ ಭಾರತ ವಾರಪತ್ರಿಕೆಯ ಸಂಪಾದಕರಾದ ಹೊನ್ನುರಸ್ವಾಮಿ ಕೆ.ಟಿ. ಅವರಿಗೆ ಪ್ರತಿಷ್ಠಿತ "ನಿರ್ಭೀತ ವರದಿಗಾರ ರತ್ನ" ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು.

ಪ್ರಶಸ್ತಿ ಸ್ವೀಕರಿಸಿದ ಹೊನ್ನುರಸ್ವಾಮಿ ಕೆ.ಟಿ. ಅವರು ಮಾತನಾಡಿ, "ಮಾಧ್ಯಮ ಕ್ಷೇತ್ರದಲ್ಲಿ ಪ್ರಾಮಾಣಿಕತೆ, ಧೈರ್ಯ ಮತ್ತು ಜನಪರ ಬದ್ಧತೆಯನ್ನು ಉಳಿಸಿಕೊಂಡು ಪತ್ರಿಕೋದ್ಯಮವನ್ನು ಜನರ ಧ್ವನಿಯನ್ನಾಗಿ ರೂಪಿಸುವ ಕಾರ್ಯದಲ್ಲಿ ಸೂರ್ಯ ನ್ಯೂಸ್ ಕನ್ನಡ ಮಹತ್ತರ ಪಾತ್ರ ವಹಿಸುತ್ತಿದೆ. ವಿಶೇಷವಾಗಿ ಸಂಪಾದಕರಾದ ಹೇಮಂತ್ ರಾಜ್ ಅವರು ಪ್ರತಿಭಾವಂತರನ್ನು ಗುರುತಿಸಿ ಪ್ರೋತ್ಸಾಹಿಸುವ ಮೂಲಕ ಮಾಧ್ಯಮ ಕ್ಷೇತ್ರಕ್ಕೆ ಹೊಸ ಚೈತನ್ಯ ತುಂಬುತ್ತಿದ್ದಾರೆ. ನನ್ನಂತಹ ಸಾಮಾನ್ಯ ಪತ್ರಕರ್ತನ ಸೇವೆಯನ್ನು ಗುರುತಿಸಿ 'ನಿರ್ಭೀತ ವರದಿಗಾರ ರತ್ನ' ಪ್ರಶಸ್ತಿ ನೀಡಿ ಗೌರವಿಸಿರುವುದು ನನ್ನ ಜವಾಬ್ದಾರಿಯನ್ನು ಇನ್ನಷ್ಟು ಹೆಚ್ಚಿಸಿದೆ. ಈ ಗೌರವವನ್ನು ನಾನು ಜನಸೇವೆ, ಸತ್ಯನಿಷ್ಠೆ ಹಾಗೂ ಪತ್ರಿಕೋದ್ಯಮದ ಮೌಲ್ಯಗಳಿಗೆ ಸಮರ್ಪಿಸುತ್ತೇನೆ" ಎಂದು ಕೃತಜ್ಞತೆ ಸಲ್ಲಿಸಿದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಪರಮ ಪೂಜ್ಯ ಶ್ರೀ ಮ.ನಿ. ಪ್ರಸಿದ್ಧಲಿಂಗ ಮಹಾಸ್ವಾಮಿಗಳು, ಶ್ರೀ ಜಗದ್ಗುರು ಕೊಟ್ಟೂರು ಸ್ವಾಮಿ ಶಾಖಾ ಮಠ, ಸೋಮಸಮುದ್ರ ಹಾಗೂ ಪರಮ ಪೂಜ್ಯ ಶ್ರೀ ಮರಿಕೊಟ್ಟೂರು ದೇವರು, ಶ್ರೀ ಜಗದ್ಗುರು ಕೊಟ್ಟೂರು ಸ್ವಾಮಿ ಸಂಸ್ಥಾನ ಶಾಖಾ ವಿರಕ್ತ ಮಠ, ಶ್ರೀಧರಗಡ್ಡೆ ವಹಿಸಿದ್ದರು.

ಕಾರ್ಯಕ್ರಮವನ್ನು ಶ್ರೀ ಪಿ. ಗಾದೆಪ್ಪ, ಮಹಾಪೌರರು, ಮಹಾನಗರ ಪಾಲಿಕೆ ಬಳ್ಳಾರಿ ಹಾಗೂ ಶ್ರೀಯುತ ಜಿ.ಕೆ. ಸ್ವಾಮಿ, ಸಂಸ್ಥಾಪಕರು, ಜಿ.ಹೆಚ್. ಫೌಂಡೇಶನ್, ಬಳ್ಳಾರಿ ಉದ್ಘಾಟಿಸಿದರು.

ಮುಖ್ಯ ಅತಿಥಿಗಳಾಗಿ ಶ್ರೀ ಶ್ರೀಧರ್ ಭಾರೀಕರ್, ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕು ಪಂಚಾಯತ್ ಬಳ್ಳಾರಿ ಭಾಗವಹಿಸಿದ್ದರು.

ವಿಶೇಷ ಆಹ್ವಾನಿತರಾಗಿ ಶ್ರೀಮತಿ ಎಂ. ರಾಜೇಶ್ವರಿ ಸುಬ್ಬಾರಾಯುಡು, ಮಾಜಿ ಮಹಾಪೌರರು ಹಾಗೂ ಹಾಲಿ ಸದಸ್ಯರು, ಮಹಾನಗರ ಪಾಲಿಕೆ ಬಳ್ಳಾರಿ, ಅರುಣ್ ಭೂಪಾಲ್, ಬಿಪಿ ನ್ಯೂಸ್ ಸಂಪಾದಕರು, ಕೃಷ್ಣ ಮೋಹನ್ ಶೆಟ್ಟಿ, ಚಲನಚಿತ್ರ ನಿರ್ದೇಶಕರು ಹಾಗೂ ಹೇಮಂತ್ ರಾಜ್, ಸಂಪಾದಕರು, ಸೂರ್ಯ ನ್ಯೂಸ್ ಕನ್ನಡ ಮತ್ತು ಕರ್ನಾಟಕ ಪತ್ರಕರ್ತರ ಸಂಘದ ಜಿಲ್ಲಾ ಸಮಿತಿ ಸದಸ್ಯರು ಉಪಸ್ಥಿತರಿದ್ದರು.

ವೇದಿಕೆಯಲ್ಲಿ ಪ್ರೊ. ಗೀರೀಶ್ ಕುಮಾರ್, ಸಾಮಾಜಿಕ ಹೋರಾಟಗಾರರಾದ ಸಂಗನಕಲ್ಲು ವಿಜಯ್, ಸಿದ್ದೇಶ್, ಈರಣ್ಣಗೌಡ, ಇಶಾಕ್, ಧನಂಜಯ, ಎಂ.ಜಿ. ಕನಕ ಸೇರಿದಂತೆ ಹಲವಾರು ಗಣ್ಯರು ಹೊನ್ನುರಸ್ವಾಮಿ ಕೆ.ಟಿ. ಅವರನ್ನು ಸನ್ಮಾನಿಸಿ ಶುಭ ಹಾರೈಸಿದರು.

## ಮಳೆಬರುವಿಕೆಗಾಗಿ ಗ್ರಾಮದೇವತೆ ಆಲಯದಲ್ಲಿ ಭಕ್ತರಿಂದ ಭಜನೆ

**ಗುರುಮಠಕಲ್:** ಮುಂಗಾರು ಬಿತ್ತನೆ ಮಡಿದ ರ?ತರು ಪ್ರತಿದಿನಾಲು ತಮ್ಮ ತಮ್ಮ ಹೊಲಗಳಿಗೆ ಹೊಗಿ ಬಿತ್ತಿದ ಬೀಜಗಳ ಮೊಳಕೆಗಳನ್ನು ನೊಡಿ, ಅಯ್ಯೋ ಶಿವನೆ ಎಂತಹ ಪರಸ್ಥಿತಿಯಲ್ಲಿ ರೈತರನ್ನು ಇಟ್ಟು ನೋಡುತ್ತಿರುವಿಯಲ್ಲ. ನಿನ್ನ ತಲೆಯಮೇಲಿರುವ ಗಂಗಾ ಮಾತೆಯನ್ನು ನಿನ್ನ ಜಡೆಯಲ್ಲಿ ಸುತ್ತಿ ಕೊಂಡು ಕುಳಿತರೆ ಸಕಲ ಚರಾಚರ ಜೀವರಾಶಿಗಳ ಪಾಡೆನು, ಬಿತ್ತಿದ ಬೀಜಗಳ ಪಾಡೆನು ನಿನ್ನ ಜಡೆಯಲ್ಲಿರುವ ಗಂಗಾಮಾತೆಯನ್ನು ಧರೆಗಿಳಿಸಿ, ಸರ್ವರನ್ನು ಸಂರಕ್ಷಣೆ ಮಾಡುವ ಭಕ್ತ ವತ್ಸಲವೆಂಬ ಬಿರುದುವುಳವ, ಸಾಕ್ಷಾತ್ ಶಿವ ಪರಮೇಶ್ವರನು ನೀನು. ಮಾತಾ ಪಾರ್ವತಿ ಮಾತೆಯ ಸಮೇತನಾಗಿ, ನಿನ್ನ ಜಡೆಯಲ್ಲಿರುವ ಗಂಗಮ್ಮ ತಾಯಿಯನ್ನು ಧರೆಗಿಳಿಸಿ ಸರ್ವರ ದುಃಖವನ್ನಳಿಸಲು ಗಂಗಮ್ಮ ದೇವಿ ಮಾತೆಯನ್ನು (ಮಳೆಯನ್ನು) ಭೂವಿಗೆ ಇಳಿಸಿ ಸಕಲರಿಗೆ ಸಂತೋಷ ನೀಡಲಿ ಎಂದು ತಾಲೂಕಿನ ಸಮಿಪದ ಚಂಡರಕಿ ಗ್ರಾಮದಲ್ಲಿ ಗ್ರಾಮದೇತೆ ಶ್ರೀ ಮಾತ ಊರಡಮ್ಮ ದೇವಿ ದೇವಸ್ಥಾನದಲ್ಲಿ ಭಕ್ತರು ಮಳೆ ಬರುವಿಕೆಗಾಗಿ ಭಜನೆ ಮಾಡಿದರು. ಈ ವೇಳೆ ಗ್ರಾಮದ ಭಕ್ತರು ಭಜನೆಯಲ್ಲಿ ಇದ್ದರು.



## ಜೂ.17 ರಂದು ಬೆಳ್ಳಿರಥ ಸಮರ್ಪಣೆ

**ಬಾದಾಮಿ,ಜೂ16:** 106 ಕೆಜಿ ಮೌಲ್ಯದ ನೂತನ ಬೆಳ್ಳಿರಥವನ್ನು ಜೂ.17 ರಂದು ಬುಧವಾರ ಬನಶಂಕರಿದೇವಿಗೆ ಸಮರ್ಪಣೆ ಮಾಡಲಾಗುತ್ತಿದೆ ಎಂದು ಶ್ರೀ ಬನಶಂಕರಿದೇವಸ್ಥಾನ ಟ್ರಸ್ಟ್ ಕಮಿಟಿ ಚೇರಮನ್ ವೆಂಕಟೇಶ ಪೂಜಾರ ತಿಳಿಸಿದರು.

ಅವರು ಪತ್ರಿಕಾಗೋಷ್ಟಿಯಲ್ಲಿ ಮಾತನಾಡಿ, ಭಕ್ತರ ಹಾಗೂ ಅರ್ಚಕರ ಬಹುದಿನಗಳ ಆಶಯದಂತೆ ದೇವಸ್ಥಾನದಲ್ಲಿ ಭಕ್ತರ ಸಹಕಾರ ಮತ್ತು ಪ್ರೇರಣೆಯಿಂದ ಭಕ್ತರ ದೇಣಿಗೆಯಿಂದ ಒಂದು ವರ್ಷದ ಒಳಗೆ ಬೆಳ್ಳಿ ಲೇಪನ ರಥವನ್ನು ನಿಪ್ಪಾಣಿಯ ಸುರೇಶ ಶೆಟ್ಟಿಯವರು ನಿರ್ಮಾಣ ಮಾಡಿದ್ದಾರೆ.

ಜೂ.16 ರಂದು ಮತ್ತು ಜೂ.17 ರಂದು ಎರಡು ದಿನಗಳ ಕಾಲ ಪೂಜಾ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದ್ದು, ಪೂಜೆ ಮುಗಿದ ನಂತರ ಜೂನ್ 17 ರಂದು ಬುಧವಾರ ಮಧ್ಯಾಹ್ನ 12.45 ಕ್ಕೆ ಸಮರ್ಪಣೆ ಮಾಡಲಾಗುವುದು. ಕುಮಟಾದಲ್ಲಿ ಸಾಗವಾನಿ ರಥ ಮಾಡಿಸಿ ಅದರ ಮೇಲೆ 106 ಕೆಜಿಯ ಶುದ್ಧ ಬೆಳ್ಳಿಯ ಲೇಪನ ಮಾಡಲಾಗಿದೆ. ಸುಮಾರು 15 ಲಕ್ಷ ತಯಾರಿಕೆ ಮಜೂರಿ ನೀಡಿ ನೂತನ ಬೆಳ್ಳಿ ರಥದ ದೇವಿಯ ಉತ್ಸವ ಮೂರ್ತಿಯನ್ನು ರಥದಲ್ಲಿ ಸ್ಥಾಪಿಸಿ ರಥೋತ್ಸವವನ್ನು ಸ್ಥಾಪಿಸಲಾಗುವುದು. ಸಿಂಹದ ಲಾಂಛನ ಮತ್ತು ಅಷ್ಟ ಲಕ್ಷ್ಮೀಯರ ಚಿತ್ರ ರಚಿಸಲಾಗಿದೆ. ಸುಮಾರು 5 ರಿಂದ 6 ಕೋಟಿ ವೆಚ್ಚದಲ್ಲಿ ಇದನ್ನು ನಿರ್ಮಿಸಲಾಗಿದೆ. ವಿವಿದ ರಾಜ್ಯಗಳ ಸುಮಾರು 25 ಜನ ಅಕ್ಕಸಾಲಿಗರು ಸುಮಾರು 6 ತಿಂಗಳಿನಿಂದ ಬೆಳ್ಳಿ ರಥ ನಿರ್ಮಾಣ ಕಾರ್ಯದಲ್ಲಿ ತೊಡಗಿದ್ದರು.



ಜೂ.16 ರಂದು ಮಂಗಳವಾರ ವಿವಿದ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿವೆ. ಜೂ.17 ರಂದು ಬೂಧವಾರ ಬೆಳಿಗ್ಗ 10 ಗಂಟೆಗೆ ವಿವಿದ ಪೂಜಾ ಕಾರ್ಯಕ್ರಮಗಳ ನಂತರ ಮಧ್ಯಾಹ್ನ 12.45 ಗಂಟೆಗೆ ನಡೆಯುವ ದೇವಿ ರಥ ಸಮರ್ಪಣೆ ಬೃಹತ್ ಕಾರ್ಯಕ್ರಮದಲ್ಲಿ ಭಕ್ತಾಧಿಗಳು ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.

ಪತ್ರಿಕಾಗೋಷ್ಟಿಯಲ್ಲಿ ಪೂಜಾರ ಮನೆತನ ಕುಟುಂಬಸ್ಥರಾದ ಮಹೇಶ, ಮಹಾಂತೇಶ, ವಿದ್ಯಾನಂದ, ಶಂಕರ, ಲಕ್ಷಣ, ಚಿದಂಬರ, ಕಿರಣ, ರಮೇಶ, ಶ್ರೀನಿವಾಸ, ಶ್ರೀರಂಗ, ಉದಯ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಕೈಕೊಟ್ಟ ಮಳೆ: ಭೀತಿಯಲ್ಲಿ ರೈತ

**ಲಕ್ಷ್ಮೇೀಶ್ವರಜು.16:** ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ರೈತರು ರೋಹಿಣಿ ಮಳೆಗೆ ಭೂಮಿ ತೇವಾಂಶ ಗೊಂಡ ಹಿನ್ನೆಲೆಯಲ್ಲಿ ಮುಂಗಾರಿಯ ಬೆಳೆಗಳಾದ ಹೆಸರು ಹತ್ತಿ ಗೋವಿನ ಜೋಳ ಹಲಸಂದಿ ಬಿತ್ತಿದರು.

ಆದರೆ ಈಗ ಕಳೆದ ಒಂದು ವಾರದಿಂದ ಮೃಗಶಿರ ಮಳೆಯ ಕಣ್ಣು ಮುಚ್ಚಾಲೆಯಿಂದ ರೈತರು ಮೊಳಕೆ ನಾಟಿರುವ ಬೀಜಗಳು ಎಲ್ಲಿ ಒಣಗುತ್ತವೆಯೋ ಎಂಬ ಭೀತಿಯಲ್ಲಿದ್ದಾರೆ.

ಕೃಷಿ ಇಲಾಖೆಯ ಮೂಲಗಳಿಂದ ಲಭ್ಯವಾಗಿರುವ ಮಾಹಿತಿಯ ಪ್ರಕಾರ ಕಳೆದ ವರ್ಷ ಅಂದರೆ 2025 ರ ಜೂನ್ ತಿಂಗಳಲ್ಲಿ 133. 8 ಮಿಲಿ ಮೀಟರ್ ಮಳೆಯಾಗಿತ್ತು ಆದರೆ ಪ್ರಸಕ್ತ 2026ರಲ್ಲಿ ಕೇವಲ 52.1 ಮಿಲಿಮೀಟರ್ ಮಳೆಯಾಗಿದೆ. ಅಂದರೆ 81.7 ಮಿಲಿ ಮೀಟರ್ ಮಳೆ ಕೊರತೆಯಾಗಿದೆ.

ಇದರಿಂದಾಗಿ ನೀರಾವರಿ ಸೌಲಭ್ಯವಿರುವ ರೈತರು ಸ್ಪಿಂಕ್ಲರ್ ಗಳ ಮೂಲಕ ಬಿತ್ತಿದ ಬೆಳೆಯನ್ನು ಉಳಿಸಿಕೊಳ್ಳಲು ಹರಸಾಹಸ ಪಡುತ್ತಿದ್ದಾರೆ ಇನ್ನೊಂದು ವಾರ ಮಳೆ ಏನಾದರೂ ಕೈ ಕೊಟ್ಟರೆ ಮುಂಗಾರಿನ ಹೆಸರು ಮೆಕ್ಕೆಜೋಳ ಹತ್ತಿ ಬೆಳೆಗಳ ಮೇಲೆ ಪರಿಣಾಮ ಬೀರಲಿದೆ ಎಂಬುದು ರೈತರ ಅಂಬೋಣವಾಗಿದೆ.



# ನೋವಿನಲ್ಲಿರುವ ಕುಟುಂಬಕ್ಕೆ ಧೈರ್ಯ ತುಂಬಿದ ಶಾಸಕ ಚವ್ಹಾಣ



**ಔರಾದ್ :ಜೂ.16:** ಹೈದರಾಬಾದ್‌ನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಶೆಂಬೆಳ್ಳಿ ಗ್ರಾಮದ ವಿಜಯಶ್ರೀ ವೈಜಿನಾಥ ಮೇತ್ರೆ ಅವರ ಆರೋಗ್ಯವನ್ನು ಶಾಸಕ ಪ್ರಭು ಚವ್ಹಾಣ ಅವರು ದೂರವಾಣಿ ಮೂಲಕ ಧೈರ್ಯ ತುಂಬಿದ್ದಾರೆ.

ಪೂರ್ವನಿಗದಿತ ಕಾರ್ಯಕ್ರಮದ ನಿಮಿತ್ತ ಆಂಧ್ರಪ್ರದೇಶಕ್ಕೆ ತೆರಳಿರುವ ಶಾಸಕರು, ಆಸ್ಪತ್ರೆಯಲ್ಲಿರುವ ಬಾಲಕಿಯ ಪೋಷಕರನ್ನು ದೂರವಾಣಿ ಮೂಲಕ ಸಂಪರ್ಕಿಸಿ ಆರೋಗ್ಯದ ಕುರಿತು ಮಾಹಿತಿ ಪಡೆದರು. ಬಳಿಕ ಚಿಕಿತ್ಸೆ ನೀಡುತ್ತಿರುವ ವೈದ್ಯರೊಂದಿಗೆ ಮಾತನಾಡಿ, ಮಗುವಿನ ಆರೋಗ್ಯ ಸ್ಥಿತಿಗತಿ ಮತ್ತು ಚಿಕಿತ್ಸೆಯ ವಿವರಗಳನ್ನು ಪಡೆದರು. ನನ್ನ ಕ್ಷೇತ್ರದ ಬಾಲಕಿಯನ್ನು ಸರಿಯಾಗಿ ನೋಡಿಕೊಳ್ಳಬೇಕು. ಉತ್ತಮ ಚಿಕಿತ್ಸೆ ನೀಡಿ ಶೀಘ್ರ ಗುಣಮುಖವಾಗಿಸಬೇಕೆಂದು ಸೂಚಿಸಿದರು.

ಒಂದೇ ಕುಟುಂಬದ ಇಬ್ಬರು ಮಕ್ಕಳು ಮೃತಪಟ್ಟು ಒಬ್ಬರು ಆಸ್ಪತ್ರೆಯಲ್ಲಿರುವ ಘಟನೆ ತೀವ್ರ ಆಘಾತ ಉಂಟುಮಾಡಿದೆ. ಇವರ ಕುಟುಂಬದ ಆರ್ಥಿಕ ಪರಿಸ್ಥಿತಿ ಅತ್ಯಂತ ದುರ್ಬಲವಾಗಿದ್ದು, ಅವರಿಗೆ ಹೇಳಿಕೊಳ್ಳುವಂತಹ ಕೃಷಿ ಭೂಮಿಯೂ ಇಲ್ಲ. ದಿನಗೂಲಿ ಕೆಲಸ ಮಾಡಿ ಜೀವನ ಸಾಗಿಸುತ್ತಿರುವ ಇಂತಹ ಬಡ ಕುಟುಂಬಕ್ಕೆ ಒಂದೇ ವೇಳೆ ಇಷ್ಟೊಂದು ದುಃಖ ಮತ್ತು ಸಂಕಷ್ಟ ಎದುರಾಗಿರುವುದು ಅತ್ಯಂತ ನೋವಿನ ಸಂಗತಿಯಾಗಿದೆ ಎಂದು ಹೇಳಿದರು.

ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ವಿಜಯಶ್ರೀ ಅವರ ಚಿಕಿತ್ಸಾ ವೆಚ್ಚವನ್ನು ತಾವು ಭರಿಸುವುದಾಗಿ ಭರವಸೆ ನೀಡಿದ ಶಾಸಕರು, ವೈಯಕ್ತಿಕವಾಗಿ ಅಗತ್ಯ ಸಹಾಯ–ಸಹಕಾರ ನೀಡುತ್ತೇನೆ. ಮಕ್ಕಳ ಮುಂದಿನ ವಿದ್ಯಾಭ್ಯಾಸ, ಮದುವೆ ಸೇರಿದಂತೆ ಕುಟುಂಬಕ್ಕೆ ಅಗತ್ಯವಿರುವ ಎಲ್ಲ ರೀತಿಯ ನೆರವು ಒದಗಿಸುತ್ತೇನೆ. ಜೊತೆಗೆ ಸರ್ಕಾರದ ವತಿಯಿಂದಲೂ ಸೂಕ್ತ ನೆರವು ಕಲ್ಪಿಸಲು ಪ್ರಯತ್ನಿಸುವುದಾಗಿ ಹೇಳಿದರು.

ಈ ಸಂಕಷ್ಟದ ಸಂದರ್ಭದಲ್ಲಿ ತಾವು ಕುಟುಂಬದೊಂದಿಗೆ ಸದಾ ಇರುತ್ತೇನೆ. ಯಾವುದೇ ಕಾರಣಕ್ಕೂ ಆತ್ಮಸ್ಥೈರ್ಯ ಕಳೆದುಕೊಳ್ಳಬಾರದು ಎಂದು ಕುಟುಂಬಸ್ಥರಲ್ಲಿ ಧೈರ್ಯ ತುಂಬಿದರು.

ಮಾವಿನ ಹಣ್ಣು ಸೇವಿಸಿದ ಬಳಿಕ ಅಸ್ವಸ್ಥಗೊಂಡು ಇಬ್ಬರು ಸಹೋದರಿಯರು ಸಾವನ್ನಪ್ಪಿದ್ದಾರೆ ಎನ್ನಲಾಗುತ್ತಿದೆ. ಈ ಅನುಮಾನಾಸ್ಪದ ಸಾವಿನ ಪ್ರಕರಣದ ಕುರಿತು ಸಮಗ್ರ ಹಾಗೂ ನಿಷ್ಪಕ್ಷಪಾತ ತನಿಖೆ ನಡೆಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಸತ್ಯಾಂಶ ಹೊರಬರಲು ಸರ್ಕಾರದ ಮೇಲೆಯೂ ಒತ್ತಡ ಹೇರುವುದಾಗಿ ಶಾಸಕ ಪ್ರಭು ಚವ್ಹಾಣ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉದ್ಘಾಟನಾ ಕಾರ್ಯಕ್ರಮ



**ಲಕ್ಷ್ಮೇಶ್ವರ,ಜೂ16:** ತಾಲೂಕಿನ ಶಿಗ್ಲಿ ಗ್ರಾಮದ ಶಾಕಾಂಬರಿ ಸಮುದಾಯ ಭವನದಲ್ಲಿ ವೀರಾಣಿ ಕಿತ್ತೂರು ಚೆನ್ನಮ್ಮ ವಿವಿಧೋದ್ದೇಶಗಳ ಸಂಘದ ಆಶ್ರಯದಲ್ಲಿ ಪ್ರತಿಭಾ ಪುರಸ್ಕಾರ ಪಂಚಮಸಾಲಿ ಸಮಾಜದ ನೌಕರರ ಸಂಘ ಇದರ ಉದ್ಘಾಟನಾ ಕಾರ್ಯಕ್ರಮ ಜರುಗಿತು.

ಕಾರ್ಯಕ್ರಮದ ಸಾನಿಧ್ಯವಹಿಸಿ ಆಶೀರ್ವಚನ ನೀಡಿದ ಹೂವಿನ ಶಿಗ್ಲಿ ವಿರಕ್ತಮಠದ ಚನ್ನವೀರ ಮಹಾಸ್ವಾಮಿಗಳು ವೀರರಾಣಿ ಕಿತ್ತೂರು ಚೆನ್ನಮ್ಮ ವಿವಿಧೋದ್ದೇಶಗಳ ಸಂಘ ಪ್ರತಿಭಾ ಪುರಸ್ಕಾರ ನಿವೃತ್ತರಿಗೆ ಸನ್ಮಾನ ಮತ್ತು ತಾಲೂಕ ಪಂಚಮಸಾಲಿ ನೌಕರರ ಸಂಘದ ಸಂಘಟನೆ ಈ ಕಾರ್ಯಕ್ರಮಗಳನ್ನು ಮಾಡುವ ಮೂಲಕ ಸಮಾಜಮುಖಿ ಕಾರ್ಯಕ್ರಮಗಳಿಗೆ ಒತ್ತು ನೀಡುತ್ತಿರುವುದು ಶ್ಲಾಘನೀಯ.

ಸಂಘ ಸಂಸ್ಥೆಗಳು ಕೇವಲ ತಮ್ಮದೇ ಆದ ಕಾರ್ಯ ಚಟುವಟಿಕೆಗಳ ಜೊತೆಗೆ ಎಲ್ಲಾ ಸಮಾಜದ ಪ್ರತಿಭೆಗಳನ್ನು ಗುರುತಿಸಿ ಅವರಿಗೆ ಶೈಕ್ಷಣಿಕ ಮುನ್ನಡೆಗೆ ಪ್ರೋತ್ಸಾಹ ನೀಡುತ್ತಿರುವುದು ಮತ್ತು ಸೇವೆಯಿಂದ ನಿವೃತ್ತರಾದವರಿಗೆ ಸನ್ಮಾನಿಸುವುದು ಒಂದು ಒಳ್ಳೆಯ ಕಾರ್ಯ.

ಇಂದು ಸನ್ಮಾನ ಗೋಂಡ ವಿದ್ಯಾರ್ಥಿಗಳು ಭವಿಷ್ಯತ್ತಿನಲ್ಲಿ ಉತ್ತಮ ನಾಗರಿಕರಾಗಿ ಉತ್ತಮ ಶಿಕ್ಷಣ ಪಡೆದು ಯಾವ ಸಮಾಜ ತಮ್ಮನ್ನು ಗೌರವಿಸಿದೆಯೋ ಆ ಸಮಾಜಕ್ಕೆ ಋಣ ತೀರಿಸಬೇಕು ಹೆತ್ತ ತಂದೆ ತಾಯಿಗಳ ವಿದ್ಯೆ ಕೊಟ್ಟ ಶಿಕ್ಷಕರ ಬಗ್ಗೆ ಸದಾ ಗೌರವವನ್ನು ಹೊಂದಬೇಕು ಎಂದು ಹೇಳಿದರು.

ಉದ್ಘಾಟನೆ ನೆರವೇರಿಸಿದ ಗದಗ ಜಿಲ್ಲಾ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ಅಧ್ಯಕ್ಷ ಈರಣ್ಣ ಕರಿಬಿಷ್ಟಿಯವರು ಚೆನ್ನಮ್ಮ ರಾಣಿ ವಿವಿದೋದ್ದೇಶಗಳ ಸಂಘ ಇಂತಹ ರಚನಾತ್ಮಕ ಕಾರ್ಯ ಮಾಡೋ ಮೂಲಕ ಮತ್ತಷ್ಟು ತನ್ನ ಜವಾಬ್ದಾರಿಯನ್ನು ಹೆಚ್ಚಿಸಿಕೊಂಡಿದೆ ಸಮಾಜದಲ್ಲಿ ಸೇವೆ ಸಲ್ಲಿಸಿದವರಿಗೆ ಪ್ರತಿಭೆಗಳಿಗೆ ಗೌರವಿಸುವುದು ನಮ್ಮ ಆದ್ಯ ಕರ್ತವ್ಯ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ನಿವೃತ್ತ ಪೊಲೀಸ ಅಧಿಕಾರಿ ಶಂಕರ್ ರಾಗಿಯವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ತಾಲೂಕ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ಅಧ್ಯಕ್ಷ ಮಾಗಡಿ ಎಸ್ ಪಿ ಬಳಿಗಾರ ಸೋಮಣ್ಣ ಡಾಣಗಲ್ಲ ಬಸವರಾಜ್ ತುಳಿ ನಿಂಗಪ್ಪ ಹುನಗುಂದ ಶಿವಪ್ಪ ಕೆಸರಳ್ಳಿ ನೀಲಪ್ಪ ಹತ್ತಿ ಕಾಳ ಚನ್ನಬಸಪ್ಪ ಬಾಳಿಕಾಯಿ ಚನ್ನಬಸಪ್ಪ ರಾಗಿ ಫಕೀರೇಶ ಹುನುಗುಂದ ಎಸ್ ಕೆ ಹೆಬ್ಬಳ್ಳಿ ಆರ್ ಎನ್ ತೇಲ್ಕರ್ ಹನುಮಂತಪ್ಪ ತಳವಾರ ರಾಮಣ್ಣ ಲಮಾಣಿ ಬಾಲಚಂದ್ರ ಜನಿವಾರದ ನಿಜಗುಣಯ್ಯ ಮುಳುಗುಂದ ಮಠ ಮಹದೇವಪ್ಪ ಬೆಳವಗಿ ಬಸವರಾಜ ಕರ್ಜಗಿ ಸಿ ಆರ್ ಗೋಕಾವಿ ರಾಣಿ ಚೆನ್ನಮ್ಮ ವಿವಿಧೇಶ ಸಹಕಾರಿ ಸಂಘದ ಅಧ್ಯಕ್ಷರು ನಿರ್ದೇಶಕರು ಇದ್ದರು.

# ಕಾನೂನು ಅರಿವು ಕಾರ್ಯಕ್ರಮ



**ಧಾರವಾಡ, ಜೂ16:** ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಶಾಲಾ ಶಿಕ್ಷಣ ಇಲಾಖೆ, ಶ್ರೀಮತಿ ವಿದ್ಯಾ ಪಿ ಹಂಚಿನಮನಿ, ಪದವಿ ಪೂರ್ವ ವಿಜ್ಞಾನ ಕಾಲೇಜು, ಧಾರವಾಡ ಇವರ ಸಂಯುಕ್ತಾಶ್ರಯದಲ್ಲಿ ಪೋಕ್ಸೊ ಕಾಯಿದೆ ಹಾಗೂ ಮಾದಕ ವಸ್ತುಗಳ ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಕಾನೂನು ಅರಿವು ಕಾರ್ಯಕ್ರಮ ಶ್ರೀಮತಿ ವಿದ್ಯಾ ಪಿ ಹಂಚಿನಮನಿ, ಪದವಿ ಪೂರ್ವ ವಿಜ್ಞಾನ ಕಾಲೇಜು, ಧಾರವಾಡ ಇಲ್ಲಿ ನಡೆಯಿತು.


ಉದ್ಘಾಟನೆಯನ್ನು ಎನ್.ವಿ.ವಿಜಯ, ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಅಧ್ಯಕ್ಷರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಧಾರವಾಡ ಇವರು ಸಸಿಗೆ ನೀರು ಹಾಕುವುದರ ಮೂಲಕ ನೆರವೇರಿಸಿದರು. ಮಾದಕ ದ್ರವ್ಯ ವ್ಯಸನದಿಂದ ಇಂದಿನ ಯುವಕರ ಮೇಲೆ ಉಂಟಾಗುವ ದುಷ್ಪರಿಣಾಮದ ಕುರಿತು ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಎಚ್. ಶಶಿಧರ ಶೆಟ್ಟಿ, ಗೌರವಾನ್ವಿತ ಜಿಲ್ಲಾ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ಇವರು ಭಾಗವಹಿಸಿ ಪೋಕ್ಸೋ ಕಾಯಿದೆಯ ಕುರಿತು ಮಾತನಾಡಿದರು. ಅಲ್ಲಪ್ಪ ಎಂ ಬಡಿಗೇರ, ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಧಾರವಾಡ ಹಾಗೂ ಉಮೇಶ ಬೊಮ್ಮಕ್ಕನವರ, ಶಾಲಾ ಶಿಕ್ಷಣ ಇಲಾಖೆ, ಧಾರವಾಡ ಇವರು ಮುಖ್ಯ ಅತಿಥಿಗಳಾಗಿ ಹಾಜರಿದ್ದರು. ಅಧ್ಯಕ್ಷತೆಯನ್ನು ರಾಜು ಎಸ್ ಕಡೆಮನಿ, ಪ್ರಾಂಶುಪಾಲರು, ವಿ.ಪಿ.ಎಚ್ ಪಿಯು ಕಾಲೇಜು, ಧಾರವಾಡ ಇವರು ವಹಿಸಿದ್ದರು.

ಬಾಲಸುಬ್ರಹ್ಮಣ್ಯ, ಸಾರ್ವಜನಿಕ ಸಂಪರ್ಕ ಅಧಿಕಾರಿಗಳು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು, ಕಾಲೇಜಿನ ಪ್ರಾಧ್ಯಾಪಕ ವೃಂದದವರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಸುದ್ದಿ ಮತ್ತು
ಜಾಹೀರಾತಿಗಾಗಿ
ಸಂಪರ್ಕಿಸಿ
6360866626

# ನವೋದಯ ವಿದ್ಯಾಲಯಕ್ಕೆ ಜಿಲ್ಲಾಧಿಕಾರಿ ಭೇಟಿ



**ಧಾರವಾಡ, ಜೂ16:** ಧಾರವಾಡ ಜವಾಹರ್ ನವೋದಯ ವಿದ್ಯಾಲಯಕ್ಕೆ ಜೂನ್ 9 ರಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಹಾಗೂ ಪ್ರೊಬೇಷನರಿ ಐಎಎಸ್ ಅಧಿಕಾರಿ ಅನುಪ್ರಿಯಾ ಸಾಕ್ಯಾ ಅವರು ಭೇಟಿ ನೀಡಿ, ವಿದ್ಯಾಲಯದ ವಿವಿಧ ಚಟುವಟಿಕೆಗಳನ್ನು ಪರಿಶೀಲಿಸಿದರು.

ಈ ಸಂದರ್ಭದಲ್ಲಿ ವಿದ್ಯಾಲಯದ ತರಗತಿ ಕೊಠಡಿಗಳು, ಗ್ರಂಥಾಲಯ, ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ಸಹಪಠ್ಯ ಚಟುವಟಿಕೆಗಳು, ಅಡುಗೆಮನೆ, ದಿನಸಿ ಸಾಮಗ್ರಿಗಳ ಉಗ್ರಾಣ, ವಿದ್ಯಾರ್ಥಿ ವಸತಿ ನಿಲಯಗಳು, ಕ್ರೀಡಾಂಗಣ ಹಾಗೂ ಇತರೆ ಸೌಲಭ್ಯಗಳನ್ನು ಕೂಲಂಕುಶವಾಗಿ ಪರಿಶೀಲಿಸಿ ಅಗತ್ಯ ಮಾಹಿತಿಯನ್ನು ಪಡೆದು, ಅಭಿವೃದ್ಧಿಗೆ ಸಂಬಂಧಿಸಿದ ಹಲವು ಸಲಹೆಗಳನ್ನು ನೀಡಿದರು.

ನಂತರ ವಿದ್ಯಾರ್ಥಿಗಳೊಂದಿಗೆ ಸಮಾಲೋಚನೆ ನಡೆಸಿದ ಜಿಲ್ಲಾಧಿಕಾರಿಗಳು ಮತ್ತು ಇತರ ಅಧಿಕಾರಿಗಳು, ವಿದ್ಯಾರ್ಥಿಗಳ ಕನಸುಗಳು, ಗುರಿಗಳು ಹಾಗೂ ಭವಿಷ್ಯದ ಯೋಜನೆಗಳ ಕುರಿತು ಸಂವಾದ ನಡೆಸಿದರು. ತಮ್ಮ ಸ್ಪೂರ್ತಿದಾಯಕ ಮಾತುಗಳ ಮೂಲಕ ವಿದ್ಯಾರ್ಥಿಗಳನ್ನು ಸರ್ವತೋಮುಖ ಬೆಳವಣಿಗೆ ಸಾಧಿಸಲು ಹುರಿದುಂಬಿಸಿದರು. ನಂತರ ವಿದ್ಯಾರ್ಥಿಗಳೊಂದಿಗೆ ಕುಳಿತು ಮದ್ಯಾಹ್ನದ ಉಪಹಾರ ಸೇವಿಸಿ, ಅವರೊಂದಿಗೆ ಆತ್ಮೀಯವಾಗಿ ಬೆರೆತು ಮಾತನಾಡಿದರು. ವಿದ್ಯಾರ್ಥಿಗಳ ಉತ್ತಮ ಭವಿಷ್ಯಕ್ಕಾಗಿ ಶುಭ ಹಾರೈಸಿ ಅಭಿನಂದನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಜವಹರ್ ನವೋದಯ ವಿದ್ಯಾಲಯದ ಪ್ರಭಾರಿ ಪ್ರಾಚಾರ್ಯ ರಾಘವನ್ ಪಿ. ಕೆ., ಸಿಬ್ಬಂದಿ ವರ್ಗ, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಇದ್ದರು.

# ವನಮಹೋತ್ಸವ ಕಾರ್ಯಕ್ರಮ

**ಹಾನಗಲ್,ಜೂ.16:** ತಾಲೂಕಿನ ಕೊಪ್ಪರಸಿಕೊಪ್ಪ ಗ್ರಾಮದ ಡಾ.ಬಿ.ಆರ್.ಅಂಬೇಡ್ಕರ್ ವಿದ್ಯಾರ್ಥಿನಿಯರ ವಸತಿ ಶಾಲೆಯಲ್ಲಿ ಆಯೋಜಿಸಲಾಗಿದ್ದ ವನ ಮಹೋತ್ಸವಕ್ಕೆ ಶಾಸಕ ಶ್ರೀನಿವಾಸ ಮಾನೆ ಚಾಲನೆ ನೀಡಿ ಇತ್ತೀಚಿನ ದಿನಗಳಲ್ಲಿ ಮಾಲಿನ್ಯದಿಂದ ಪರಿಸರ ಸಮಸ್ಯೆಗಳು ಹೆಚ್ಚುತ್ತಿವೆ. ಪ್ರತಿಯೊಬ್ಬರೂ ಸಹ ಕನಿಷ್ಠ ಒಂದು ಸಸಿ ನೆಟ್ಟು ಪೋಷಿಸುವ ಕಾಳಜಿ ಪ್ರದರ್ಶಿಸಬೇಕಿದೆ ಎಂದರು.

ಗ್ಯಾರಂಟಿ ಯೋಜನೆಗಳ ಜಿಲ್ಲಾಮಟ್ಟದ ಅನುಷ್ಠಾನ ಸಮಿತಿ ಅಧ್ಯಕ್ಷ ಹನುಮಂತಪ್ಪ ಮರಗಡಿ, ತಾಲ್ಲೂಕಾ ಮಟ್ಟದ ಅನುಷ್ಠಾನ ಸಮಿತಿ ಅಧ್ಯಕ್ಷ ಈರಪ್ಪ ಬೈಲವಾಳ, ತಹಶೀಲ್ದಾರ್ ವಿಠ್ಠಲ್ ಚೌಗಲಾ, ಕೆಪಿಸಿಸಿ ಸದಸ್ಯರಾದ ಟಾಕನಗೌಡ ಪಾಟೀಲ, ಖ್ವಾಜಾಮೊಹಿದ್ದೀನ್ ಜಮಾದಾರ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಸನಗೌಡ ಪಾಟೀಲ, ಕೆಎಂಎಫ್ ನಿರ್ದೇಶಕ ಚಂದ್ರಪ್ಪ ಜಾಲಗಾರ, ವಿಷ್ಣುಕಾಂತ ಜಾಧವ, ಭರಮಣ್ಣ ಶಿವೂರ, ಅಶೋಕ ಜಾಧವ, ರಾಮಣ್ಣ ಓಲೇಕಾರ, ಪರಶುರಾಮ ಚಿಕ್ಕಣಗಿ, ಹೆಗ್ಗಪ್ಪ ಕಾಮನಹಳ್ಳಿ, ಗದಿಗೆಪ್ಪಗೌಡ ಪಾಟೀಲ, ಮಕ್ಬೂಲ್‌ಅಹ್ಮದ್ ಬಡಗಿ, ಗದಿಗೆಪ್ಪ ರಾಟಿ, ಬಾಬಾಸಾಬ ಹಂಚಿನಮನಿ, ಮಲಿಕರೆಹಾನ್ ಹಂಚಿನಮನಿ, ರವಿ ಓಲೇಕಾರ ಸೇರಿದಂತೆ ಇನ್ನೂ ಹಲವರು ಇದ್ದರು.



Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE